ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ | Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issue : 123 | ದಿನಾಂಕ : 11-06-2026 ಗುರುವಾರ Date : 11-06-2026 Thursday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಪುನೀತ್ ಕೆರೆಹಳ್ಳಿ ಜಿಲ್ಲಾ ಪ್ರವೇಶಕ್ಕೆ ಡಿಸಿ ಪೂವಿತಾ ನಿರ್ಬಂಧಿಸಿ ಆದೇಶ

**ರಾಯಚೂರು, ಜೂ.10-** ಸಮಾಜದ ಶಾಂತಿ ಸುವ್ಯವಸ್ಥೆಯ ಹಿನ್ನೆಲೆಯಲ್ಲಿ ರಾಷ್ಟ್ರ ರಕ್ಷಣೆ ಪಡೆಯ ಮುಖ್ಯಸ್ಥ ಪುನೀತ್ ಕೆರೆಹಳ್ಳಿ ಇವರನ್ನು ಜೂ.9 ರಿಂದ 11 ವರಗೆ ಜಿಲ್ಲಾ ಪ್ರವೇಶವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಪೂವಿತಾ.ಎಸ್. ಆದೇಶಿಸಿದ್ದಾರೆ. ಲಿಂಗಸೂಗೂರು ತಾಲೂಕಿನ ಹಟ್ಟಿ ಪಟ್ಟಣದಲ್ಲಿ ಆಯೋಜಿಸಲಾಗಿದ್ದ ಹಿಂದೂ ಸಮಾಜೋತ್ಸವ ಅಂಗವಾಗಿ ಮೆರವಣಿಗೆ ಹಾಗೂ ದಿಕ್ಸೂಚಿ ಭಾಷಣಕಾರರಾಗಿ ಪುನೀತ್ ಕೆರೆಹಳ್ಳಿಯವರನ್ನು ಆಹ್ವಾನಿಸಲಾಗಿತ್ತು. ಹಟ್ಟಿ ಕ್ಯಾಂಪ್ ಮತ್ತು ಹಟ್ಟಿಪಟ್ಟಣದಲ್ಲಿ ಹಿಂದೂ ಮುಸ್ಲಿಂ ಬಾಂಧವರು ಸೌಹಾರ್ದತೆಯಿಂದ ಜೀವನ ಸಾಗಿಸುತ್ತಿದ್ದು ಮತೀಯ ಭಾವನೆಗಳಿಗೆ ಧಕ್ಕೆ ಉಂಟು ಮಾಡುವ ಸಾಧ್ಯತೆಗಳ ಹಿನ್ನಲೆಯಲ್ಲಿ ರಾಜ್ಯದಾದ್ಯಂತ ಅನೇಕ ಪ್ರಕರಣಗಳು ದಾಖಲಾಗಿವೆ. ಉದ್ರೇಕಕಾರಿ ಭಾಷಣದಿಂದ ಸಾರ್ವಜನಿಕವಾಗಿ ಶಾಂತಿ ಸುವ್ಯವಸ್ಥೆ ಧಕ್ಕೆ ಯಾಗುತ್ತಿರುವ ಹಿನ್ನಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾ ಪ್ರವೇಶ ನಿರ್ಬಂಧಿಸಿ ಜಿಲ್ಲಾಧಿಕಾರಿ ಪೂವಿತಾ.ಎಸ್. ಆದೇಶಿಸಿದ್ದಾರೆ.

## ಕಂಠಪೂರ್ತಿ ಮದ್ಯಪಾನ ಮಾಡಿ ಕಾರು ಚಾಲನೆ: ಡಿವೈಡರ್‌ಗೆ ಡಿಕ್ಕಿ, ಚಾಲಕ ಪಾರು

**ರಾಯಚೂರು, ಜೂ.10-**ಮದ್ಯಪಾನ ಮಾಡಿ ಅತಿವೇಗದಲ್ಲಿ ಕಾರು ಚಲಾಯಿಸಿದ ಚಾಲಕ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದ ಘಟನೆ ನಗರದ ಜಿಲ್ಲಾ ಪಂಚಾಯತ್ ಕಚೇರಿ ಎದುರು ನಡೆದಿದೆ.

ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಶ್ರೀನಿವಾಸ ಗೌಡ ಎಂಬಾತ ಕಾರು ಚಲಾಯಿಸುತ್ತಿದ್ದ ವೇಳೆ ವಾಹನ ನಿಯಂತ್ರಣ ತಪ್ಪಿ ರಸ್ತೆ ಮಧ್ಯದ ಡಿವೈಡರ್ ಮೇಲೆ ಹತ್ತಿ ವಿದ್ಯುತ್ ಕಂಬಕ್ಕೆ ರಭಸವಾಗಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ವಿದ್ಯುತ್ ಕಂಬ ಮುರಿದು ಬಿದ್ದಿದ್ದು, ಕಾರಿನ ಮುಂಭಾಗ ಸಂಪೂರ್ಣ ಜಖಂಗೊಂಡಿದೆ. ಅಪಘಾತ ಸಂಭವಿಸಿದ ತಕ್ಷಣ ಸ್ಥಳೀಯರು ಧಾವಿಸಿ ಚಾಲಕನಿಗೆ ನೆರವು ನೀಡಿದರು. ಘಟನೆಯಿಂದ ಕೆಲಕಾಲ ಸಂಚಾರದಲ್ಲಿ ವ್ಯತ್ಯಯ ಉಂಟಾ ಯಿತು. ➘ 4

## ಮಾನ್ವಿಯಲ್ಲಿ ಡೊಮೆಸ್ಟಿಕ್ ಸಿಲಿಂಡರ್ ದುರ್ಬಳಕೆ ವಿರುದ್ಧ ತಹಸೀಲ್ದಾರ ದಾಳಿ: 15 ಸಿಲಿಂಡರ್ ವಶ

**ಮಾನ್ವಿ,ಜೂ.10-** ಡೊಮೆಸ್ಟಿಕ್ ಅಡುಗೆ ಅನಿಲ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ದುರ್ಬಳಕೆ ಮಾಡಲಾಗುತ್ತಿದೆ ಎಂಬ ದೂರುಗಳ ಹಿನ್ನೆಲೆಯಲ್ಲಿ ತಹಸೀಲ್ದಾರ ಭೀಮರಾಯ ರಾಮಸಮುದ್ರ ನೇತೃತ್ವದಲ್ಲಿ ಪಟ್ಟಣದ ಹೋಟೆಲ್ ಹಾಗೂ ಡಾಬಾಗಳ ಮೇಲೆ ದಾಳಿ ನಡೆಸಲಾಯಿತು.

ದಾಳಿ ವೇಳೆ ವಿವಿಧ ಹೋಟೆಲ್ ಮತ್ತು ಡಾಬಾಗಳಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ 15 ಡೊಮೆಸ್ಟಿಕ್ ಅಡುಗೆ ಅನಿಲ ಸಿಲಿಂಡರ್‌ಗಳನ್ನು ಅಧಿಕಾರಿಗಳು ವಶಪಡಿಸಿಕೊಂಡರು.

ವಾಣಿಜ್ಯ ಬಳಕೆಗೆ ಮೀಸಲಾದ ಕಮರ್ಷಿಯಲ್ ಸಿಲಿಂಡರ್ ಬದಲು ಸಹಾಯಧನದ ಗೃಹಬಳಕೆಯ ಸಿಲಿಂಡರ್ ಬಳಸುತ್ತಿರುವುದು ಪತ್ತೆಯಾದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ನಂತರ ಮಾತನಾಡಿದ ತಹಸೀಲ್ದಾರ ಭೀಮರಾಯ ರಾಮಸಮುದ್ರ, ಅವರು, ಡೊಮೆಸ್ಟಿಕ್ ಗ್ಯಾಸ್ ಸಿಲಿಂಡರ್‌ಗಳನ್ನು ➘ 4

### ಸಚಿವ ಸ್ಥಾನ ನೀಡುವದ ಹೈಕಮಾಂಡ ನಿರ್ಧಾರ

## ಮೂರು ವರ್ಷದ ಕಾಂಗ್ರೆಸ್ ಆಡಳಿತದಲ್ಲಿ ಜಿಲ್ಲೆಯ ಅಭಿವೃದ್ಧಿ-ಬೋಸರಾಜ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ಕಳೆದ ಮೂರು ವರ್ಷ ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿ ಆರೋಗ್ಯ, ಶಿಕ್ಷಣ ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸುವಲ್ಲಿ ಸಾಕಷ್ಟು ಅನುದಾನ ಜಿಲ್ಲೆಗೆ ಬಿಡುಡೆಯಾಗಿದ್ದು ಅಭಿವೃದ್ಧಿ ಪಥ ಮುಂದೆವರೆದಿದೆ ಎಂದು ಸಣ್ಣ ನೀರಾವರಿ ಮಾಜಿ ಸಚಿವ ಎನ್.ಎಸ್.ಬೋಸರಾಜ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿ, ಬಹುದಿನಗಳಿಂದ ಜನತೆ ನಿರೀಕ್ಷೆಯಂತೆ 25 ಕೋಟಿ ರೂ ವೆಚ್ಚದಲ್ಲಿ ಜಿಲ್ಲಾಡಳಿತ ಭವನ ನಿರ್ಮಿಸಿ ಕಾರ್ಯಾರಂಭ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ತಾಲೂಕಿನ ಜನರಿಗೆ ಅನುಕೂಲವಾಗಿದೆ. ಗದಗ, ಕೊಪ್ಪಳ, ಹಾವೇರಿ ಜಿಲ್ಲೆಗಳು ಸೇರಿದಂತೆ ಅನೇಕ ಜಿಲ್ಲೆಗಳಲ್ಲಿಯೂ ಜಿಲ್ಲಾಡಳಿತ ಭವನ ನಗರದಿಂದ ದೂರವಾಗಿ ನಿರ್ಮಿಸಲಾಗಿದ್ದು ಅಭಿವೃದ್ಧಿ ಹೊಂದುತ್ತಿರುವದರಿಂದ ಜಿಲ್ಲಾಡಳಿತ ಭವನ ದೂರವಾಗುವದಿಲ್ಲ ಎಂದು ಸಮರ್ಥಿಸಿಕೊಂಡರು.

ರಾಯಚೂರು ವಿಮಾನ ನಿಲ್ದಾಣಕ್ಕೆ ಇದ್ದ ತಾಂತ್ರಿಕ ಸಮಸ್ಯೆ ನೀಗಿಸಲಾಗಿದ್ದು 2 ತಿಂಗಳಲ್ಲಿ ಅನುಮೋದನೆ ದೊರಕಿಸಿ 264 ಕೋಟಿ ವೆಚ್ಚದಲ್ಲಿ ಕಾಮಗಾರಿ ಪ್ರಗತಿಯಲ್ಲಿದ್ದು ನಿಗಧಿತ ಅವಧಿಗೆ ಮುಂಚಿತವಾಗಿಯೇ ಕಾಮಗಾರಿ ಪೂರ್ಣಗೊಳ್ಳಲಿದೆ. ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಸರ್ಕಾರ ಅಂಗೀಕರಿಸಿ ಮಹಾನಗರ ಪಾಲಿಕೆಯಾಗಿ ಘೋಷಿಸಿದೆ. ಮೊದಲ ಹಂತದಲ್ಲಿ 200ಕೋಟಿ ರೂ ಅನುದಾನ ಒದಗಿಸಲಾಗಿದೆ.

120 ಕೋಟಿ ರೂ ವೆಚ್ಚದಲ್ಲಿ ನೂತನ ತರಕಾರಿ ಮಾರುಕಟ್ಟೆ, ಸಂಸ್ಕರಣಘಟನ ಸೇರಿದಂತೆ ಸಂಕೀರ್ಣ ನಿರ್ಮಾಣ ಮಾಡಲು ಹುಡ್ಕೋ ಸಾಲ ಪಡೆಯಲುಸರ್ಕಾರ ಮಟ್ಟದಲ್ಲಿಪ್ರಸ್ತಾವನೆಯಿದ್ದು ➘ 4

## ಪ್ರಧಾನಿ ನರೇಂದ್ರ ಮೋದಿ ಆಡಳಿತ ದಾಖಲೆ ಬಿಜೆಪಿ ಕಾರ್ಯಕರ್ತರಿಂದ ವಿಶೇಷ ಪೂಜೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ದೇಶದ ಪ್ರಧಾನಿ ನರೇಂದ್ರ ಮೋದಿ ಅಧಿಕಾರವಧಿ 12 ವರ್ಷ ಪೂರೈ ಸಿದ ಹಿನ್ನಲೆಯಲ್ಲಿ ಬಿಜೆಪಿ ಕಾರ್ಯಕರ್ತರು ನಗರದ ವಿವಿಧ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಿದರು. ನಗರದ ಮಕ್ತಲಪೇಟೆ ಶ್ರೀ ಚೌಡೇಶ್ವರಿ ದೇವಸ್ಥಾನ ದಲ್ಲಿ ಎಲೆಪೂಜೆಸಲ್ಲಿಸಿ 111 ತೆಂಗಿನಕಾಯಿ ಒಡೆದು ಅಭಿಮಾನಿಗಳು ಅಭಿನಂದಿಸಿದರು. ಬಡಾವಣೆಹಿ ರಿಯರು, ಮಹಿಳೆಯರು, ಬಿಜೆಪಿ ➘ 4



## ಸಾರಿಗೆ ದಂಡ ಪ್ರಕರಣಗಲ್ಲಿ ಶೇ.50 ವಿನಾಯ್ತಿ ಸದುಪಯೋಗ ಪಡೆಯಲು ನ್ಯಾಯಾಧೀಶ ಸಿದ್ದಪ್ಪ ಕಲ್ಯಾಣರಾವ್ ಮನವಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಜು.10-**ಜಿಲ್ಲಾ ನ್ಯಾಯಾಲಯ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಜುಲೈ 11, 2026ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಧೀಶರಾದ ಸಿದ್ದರಾಮಪ್ಪ ತಿಳಿಸಿದ್ದಾರೆ.

ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾಯಾಲಯಗಳಲ್ಲಿ ಬಾಕಿ ಇರುವ ಸಿವಿಲ್, ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು, ಮೋಟಾರು ವಾಹನ ಕಾಯ್ದೆ ಸಂಬಂಧಿತ ಪ್ರಕರಣಗಳು, ಕುಟುಂಬ ನ್ಯಾಯಾಲಯದ ಪ್ರಕರಣಗಳು ಹಾಗೂ ಇತರೆ ವಿವಿಧ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಈ ವರ್ಷದ ಎರಡನೇ ರಾಷ್ಟ್ರೀಯ ಲೋಕ ಅದಾಲತ್ ಇದಾಗಿದ್ದು, ಸರ್ಕಾರದ ಸುತ್ತೋಲೆಯಂತೆ ಜೂನ್ 21ರಿಂದ ಜುಲೈ 10ರವರೆಗೆ ಪೂರ್ವ ಸಿದ್ಧತಾ ಕಾರ್ಯಗಳು ನಡೆದಿವೆ. ಜುಲೈ 11ರಂದು ನಡೆಯಲಿರುವ ಬೃಹತ್ ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯಪೂರ್ವ ಹಂತದಲ್ಲಿರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ವಕೀಲರು, ಕಕ್ಷಿದಾರರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಂಡು ಸಮಯ ಮತ್ತು ಹಣದ ಉಳಿತಾಯ ಮಾಡಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

- ಜು.11ರಂದು ರಾಷ್ಟ್ರೀಯ ಲೋಕ ಅದಾಲತ್..
- ಜಿಲ್ಲಾ ಹಾಗೂ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಆಯೋಜನೆ..
- ಸಿವಿಲ್, ಕುಟುಂಬ, ಮೋಟಾರು ವಾಹನ ಸೇರಿದಂತೆ ವಿವಿಧ ಪ್ರಕರಣಗಳ ಇತ್ಯರ್ಥ..
- ವ್ಯಾಜ್ಯಪೂರ್ವ ಪ್ರಕರಣಗಳಿಗೂ ಅವಕಾಶ..
- ಆರ್‌ಟಿಒ ಬಾಕಿ 670 ಪ್ರಕರಣಗಳಿಗೆ ಶೇ.50 ದಂಡ ರಿಯಾಯಿತಿ..

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪ್ರಾದೇಶಿಕ ಸಾರಿಗೆ ಅಧಿಕಾರಿ ಈರಣ್ಣ, ಜಿಲ್ಲೆಯ ಆರ್‌ಟಿಒ ಕಚೇರಿಯಲ್ಲಿ 2011ರಿಂದ 2022ರವರೆಗೆ ದಾಖಲಾಗಿರುವ ಸುಮಾರು 670 ಪ್ರಕರಣಗಳು ಬಾಕಿ ಇದ್ದು, ಪ್ರಕರಣಗಳ ಇತ್ಯಾರ್ಥಕ್ಕೆ 1991 ರಿಂದ ಎಂದು ಸೂಚಿಸಲಾಗಿದ್ದು ಆದರೆ ನಮ್ಮಲ್ಲಿ 2011 ರಿಂದ ಮಾತ್ರ ಬಾಕಿ ಇವೇ ಲೋಕ ಅದಾಲತ್‌ನಲ್ಲಿ ಇವುಗಳನ್ನು ಇತ್ಯರ್ಥಪಡಿಸಿಕೊಳ್ಳಲು ಶೇ.50ರಷ್ಟು ದಂಡ ರಿಯಾಯಿತಿ ನೀಡಲಾಗುತ್ತಿದೆ ಎಂದು ಹೇಳಿದರು. ಸಂಬಂಧಿತ ವಾಹನ ಮಾಲೀಕರು ಹಾಗೂ ಸಾರ್ವಜನಿ ಕರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಅವರು ಕರೆ ನೀಡಿದರು.

## ವೀರಶೈವ ರುದ್ರಭೂಮಿ ಅಭಿವೃದ್ಧಿಗೆ 50ಲಕ್ಷ ರೂ: ಬೋಸರಾಜ ಚಾಲನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ನಗರವಾರ್ಡ34ರಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮ್ಯಾಕ್ರೋ ಯೋಜನೆಯಡಿ 50 ಲಕ್ಷ ರೂ ವೆಚ್ಚದ ವೀರಶೈವ ಲಿಂಗಾಯತ ರುದ್ರಭೂಮಿ ಅಭಿವೃದ್ಧಿ ಕಾಮಗಾರಿಗೆ ಸಣ್ಣ ನೀರಾವರಿ ಮಾಜಿ ಸಚಿವ ಎನ್.ಎಸ್.ಬೋಸರಾಜ ಚಾಲನೆ ನೀಡಿದರು.


2024-25 ಸಾಲಿನಲ್ಲಿ ಕೆಕೆಆರ್‌ಡಿಬಿ ಅನುದಾನದಲ್ಲಿ ಹೈ ಮಾಸ್ ದ್ವೀಪ ಅಳವಡಿಕೆ, ಶೆಡ್ ನಿರ್ಮಾಣ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ನಿರ್ವಹಿಸಲಾಗುತ್ತದೆ.

ವೀರಶೈವ ಸಮಾಜದ ಜಿಲ್ಲಾಧ್ಯಕ್ಷ ಶರಣಭೂಪಾಲ ನಾಡಗೌಡ ಮಾತನಾಡಿ ಸ್ಮಶಾನ ಭೂಮಿ ಅಭಿವೃದ್ಧಿಗೆ ಎನ್.ಎಸ್.ಬೋಸರಾಜ ಇವರ ಪ್ರಯತ್ನ ಫಲವಾಗಿ 50 ಲಕ್ಷ ರೂ ಅನುದಾನ ನೀಡಲಾಗಿದೆ. ಕಂಪೌಂಡ್ ಸೇರಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತದೆ. ಕೊರತೆ ಅನುದಾನನೀಡುವದಾಗಿಯೂ ಭರವಸೆ ನೀಡಿದ್ದಾರೆ. ಸಮಾಜದಿಂದ ಅಭಿನಂದಿಸುವದಾಗಿ ಹೇಳಿದರು.

ಈ ಸಂದರ್ಬದಲ್ಲಿ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಚಂದ್ರಶೇಖರ ಪಾಟೀಲ್ ಮಿರ್ಜಾಪುರು, ಉಪಾಧ್ಯಕ್ಷರಗಳಾದ ಅಶೋಕ ಪಾಟೀಲ್ ಅತ್ತನೂರು, ಶಿವಾನಂದ ಚುಕ್ಕಿ, ಟಿ.ಬಸವರಾಜ, ಕೆ.ಎಂ.ಪಾಟೀಲ್, ವಿರುಪನಗೌಡ ಬಂಡಿ, ಸದಸ್ಯರುಗಳಾದ ಗಿರಿಮಲ್ಲಪ್ಪಗೌಡ ಆನಂದ ಪಾಟೀಲ್, ಶರಣರೆಡ್ಡಿ, ವಿಜಯ ಭಾಸ್ಕರರೆಡ್ಡಿ, ಕಲ್ಲಯ್ಯಸ್ವಾಮಿ ಹಾಗೂ ಸಮಾಜ ಹಿರಿಯರಾದ ಎನ್.ಗಿರಿಜಾಶಂಕರ, ವಿರುಪನಗೌಡ ಇಟಗಿ, ಡಾ.ಮಹಾಲಿಂಗಪ್ಪ, ವೈ.ಉದಯಕುಮಾರ ಸೇರಿ ಅನೇಕರಿದ್ದರು.

## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ : ಮತದಾರರ ಪೂರ್ಣ ಮಾಹಿತಿ ಸಂಗ್ರಹಿಸಿ- ತಹಸೀಲ್ದಾರ ಸುರೇಶ ವರ್ಮಾ

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚುರು,ಜೂ.11-**ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಬಹಳ ಪ್ರಮುಖವಾದ ಕಾರ್ಯವಾಗಿದ್ದು, ದೇಶದ ಇತಿಹಾಸದಲ್ಲಿ ಐತಿಹಾಸಿಕ ಹೆಜ್ಜೆಯಾಗಿದ್ದು, ಪ್ರತಿಯೊಬ್ಬ ಬಿಎಲ್‌ಓ ಹಾಗೂ ಬಿಎಲ್‌ಎಗಳು ಎಸ್‌ಐಆರ್ ಕುರಿತು ಸಂಪೂರ್ಣ ತರಬೇತಿಯನ್ನು ಪಡೆದುಕೊಂಡು ಎಸ್‌ಐಆರ್ ಪ್ರಕ್ರಿಯೆಯನ್ನು ಉತ್ತಮವಾಗಿ ನಿರ್ವಹಿಸಬೇಕು ಎಂದು ತಹಶೀಲ್ದಾರ್ ಸುರೇಶ ವರ್ಮಾ ಹೇಳಿದರು.

ಅವರಿಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಭಾರತ ಚುನಾವಣಾ ಆಯೋಗ, ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ತರಬೇತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಎಸ್‌ಐಆರ್ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಪ್ರತಿ ಮನೆ ಮನೆಗೆ ಆಯಾ ಬೂತ್‌ನ ಬಿಎಲ್‌ಓಗಳು ಭೇಟಿ ನೀಡಿ, ಮತದಾರರ ಪಟ್ಟಿ ಪರಿಷ್ಕರಣೆ ಮಾಡಬೇಕಾಗುತ್ತದೆ. ಎನುಮೆರೇಷನ್ ಫಾರಂ(ಅನುಬಂಧ-3)ನ್ನು ತುಂಬಬೇಕು. ಜೂ.30ರಿಂದ ಜು.29ರವರೆಗೆ ಈ ಪರಿಷ್ಕರಣೆಗೆ ಕಾಲಾವಕಾಶವಿದ್ದು, ಪ್ರತಿಯೊಬ್ಬರೂ ಈ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ಅರ್ಹ ಮತದಾರರು ಮತದಾರ ➘ 4

## ರೈತರಿಗರ ರಸಗೊಬ್ಬರ, ವಸತಿ ನಿವೇಶನ ಹಕ್ಕು ನೀಡಲು ಆಗ್ರಹಿಸಿ 16ರಂದು ಪ್ರತಿಭಟನೆ-ಬಸವಂತ್ರಾಯಗೌಡ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.11-**ರೈತರಿಗೆ ಸಮರ್ಪಕ ಬೀಜ ರಸಗೊಬ್ಬರ ಪೂರೈಕೆ, ಬಡ ಕುಟುಂಬಗಳಿಗೆ ಮನೆ ನಿವೇಶನ ಹಾಗೂ ಹಕ್ಕುಪತ್ರ ವಿತರಣೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಜೂ. 16 ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಧರಣಿ ನಡೆಸಲಾಗು ವುದು ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ಬಸವಂತ್ರಾಯಗೌಡ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಬಿತ್ತನೆ ಕಾರ್ಯಕ್ಕೆ ರೈತರು ಸಿದ್ಧತೆ ನಡೆಸಿದ್ದು, ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರಗಳು ದೊರೆಯುತ್ತಿಲ್ಲ, ಬೀಜ ಮತ್ತು ರಸ ಗೊಬ್ಬರವನ್ನು ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿಸಿ, ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ನೀಡಿದರೂ ಕೃಷಿ ಇಲಾಖೆ ಕ್ರಮ ವಹಿಸುವಲ್ಲಿ ನಿರ್ಲಕ್ಷ್ಯ ವಹಿಸಿದೆ ಎಂದು ದೂರಿದರು.

ರೈತರಿಗೆ ಅಗತ್ಯಕ್ಕೆ ಅನುಗುಣವಾಗಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳನ್ನು ಎಂಆರ್‌ಪಿ ದರದಲ್ಲಿ ಸಮರ್ಪಕವಾಗಿ ಪೂರೈಸಲು ಕ್ರಮ ಕೈಗೊಳ್ಳಬೇಕು, ಕಳಪೆ ಬೀಜ ಮತ್ತು ರಸಗೊಬ್ಬರ ಮಾರಾಟ ಮಾಡುತ್ತಿರುವುದು ನಿರಂತರವಾಗಿ ನಡೆಯುತ್ತಿದೆ, ಕಡಿವಾಣ ಹಾಕಬೇಕಾಗಿ ಇಲಾಖೆ ಮಾತ್ರ ಮೌನವಹಿಸಿದೆ, ಕಳಪೆ ಬಿಜ ಮತ್ತು ರಸಗೊಬ್ಬರ ಮಾರಾಟ ಮಾಡುವವರ ಮೇಲೆ ದೂರು ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂದರು. ➘ 4

## ಜಮೀರ್ ಅಹಮದ್ ಖಾನ್ ಸಚಿವ ಸ್ಥಾನ ನೀಡದೇ ವಂಚನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.10-**ಕರ್ನಾಟಕದ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಅಲ್ಪಸಂಖ್ಯಾತರ ಧ್ವನಿಯಾಗಿರುವ ಜಮೀರ್ ಅಹ್ಮದ್ ಖಾನ್ ಅವರಿಗೆ ಸಚಿವ ನೀಡಿದೆ ವಂಚಿಸಲಾಗಿದೆ ಎಂದು ಅಂಜುಮನ್-ಎ-ಮುಸ್ಲಿಮೀನ್ ಕಮೀಟಿ ಆರೋಪಿಸಿತು.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಮಿತಿಯ ಮುಖಂಡರು, ರಾಜ್ಯದ ಮುಸ್ಲಿಂ ಸಮುದಾಯದ ಮುಖಂಡರಾದ ಜಮೀರ್ ಅಹಮದ್ ಖಾನ್, ಕಾಂಗ್ರೇಸ್ ಪಕ್ಷದ ಶಿಸ್ತಿನ ಸಿಪಾಯಿ ಆಗಿದ್ದಾರೆ. ಪಕ್ಷ ಸಂಘಟನೆ, ಚುನಾವಣೆ ಸೇರಿದಂತೆ ತಮಗೆ ವಹಿಸಿದ ಪಕ್ಷದ ಎಲ್ಲಾ ಕೆಲಸಗಳನ್ನು ಉತ್ತಮವಾಗಿ ನಿಭಾಯಿಸಿ ಸಮರ್ಥ ನಾಯಕ ಎನಿಸಿಕೊಂಡಿದ್ದಾರೆ. ಎಲ್ಲಾ ಸಮಾಜದ ಬಡವರಿಗೂ ಆರ್ಥಿಕ ನೆರವು ನೀಡುವ ಮೂಲಕ ಎಲ್ಲಾ ಸಮಾಜದ ಮುಖಂಡರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಈ ಹಿನ್ನಲೆಯಲ್ಲಿ ಜಮೀರ್ ಅಹಮದ್ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಹುಸೇನ್ ಪಾಶಾ,ಜೆ ಬಾಬು ಹಟ್ಟಿ, ರಹಿಮಾನ್ ಸಾಬ್ ಮುಲ್ಲಾ ಚಿತ್ತಾಪುರ, ಆನ್ಸರುದ್ದೀನ್, ಮಹಮ್ಮದ್ ಮುಸ್ತಫಾ, ನೂರು ಸಾಬ್ ಮಡಗಂಟನಾಳ, ಮಹಮ್ಮದ್ ರಸೂಲ್, ಮಹಮ್ಮದ್ ಯೂಸೂಪ್ ಗೌಳಿ, ಅಮೀನ್ ಸಾಬ್ ಗೌಳಿ, ಸಲೀಂ, ಜಾವೇದ್, ಖಾಜಾ ಅಲಿ, ಅಬ್ಬಾಸ್ ಸೇರಿದಂತೆ ಇತರರು ಇದ್ದರು.

## ಶೋಷಿತರ ಧ್ವನಿ ಪ್ರೊ, ಬಿ, ಕೃಷ್ಣಪ

ಶೋಷಿತ ಜನರಿಗೆ ಬೆಳಕಾದ//
ಅರಿವಿನ ಅಕ್ಷರವನ್ನು ಬಿತ್ತಿ /
ಶಿಕ್ಷಣ ಕಲಿಯಲು ಸಂದೇಶ ಸಾರಿದ//
ಅಂಬೇಡ್ಕರರ ಸಾಧನೆಯ ಮನೆಮನೆಗೆ
ಮುಟ್ಟಿಸಿದ//
ಬಿಕೆ ಎಂದರೆ ಡಿಎಸ್ಎಸ್ /
ಅಂಬೇಡ್ಕರ್ ವಾದಿಯ ಕನಸಿನ ಕೂಸು//2//

ಚಂದ್ರ ಗುತ್ತಿಯ ಬೆತ್ತಲೆ ಸೇವೆಯ
ರಹಸ್ಯವನ್ನು ಭೇದಿಸಿದ/
ಜಾತಿವಾದಿಗಳ
ತಂತ್ರವ ತಿಳಿದು
ಮೂಢ ನಂಬಿಕೆಯ ಒಡಿಸಿದ //
ಬೆತ್ತಲೆ ಸೇವೆಯ ನಿಲ್ಲಿಸಿದ
ಹೆಣ್ಣು ಮಕ್ಕಳ ಘನತೆ ಎತ್ತಿ ಹಿಡಿದ //
ಬಿಕೆ ಎಂದರೆ ಡಿಎಸ್ಎಸ್
ಮುನ್ನುಗ್ಗಿ ಜಯ ಸಾಧಿಸು/2/

ಭೂಗಳ್ಳರಿಗೆ ಶೆಡ್ಡು ಹೊಡೆದು
ಭೂ ಹೋರಾಟವನ್ನು
ರೂಪಿಸಿದ/
ಹುಲಿ ಸಿಂಹದಂತೆ
ಘರ್ಜಿಸಿ ನಿಂತ
ಭೂ ಹೀನರಿಗೆ ನ್ಯಾಯ ಕೊಡಿಸಿದಾತ//
ಚರಿತ್ರೆಯಲ್ಲಿ ಉಳಿಯುವಂಥ/
ಹೋರಾಟವನ್ನು ರೂಪಿಸಿದ//
ಬಿಕೆ ಎಂದರೆ ಡಿಎಸ್ಎಸ್/
ವಂಚಿತ ಜನರ ವರ್ಚಸ್ಸು/2/

ಬಿಕೆ ಯವರ ಕ್ರಾಂತಿಯ ಕಿಚ್ಚು
ನಮ್ಮೊಳಗಿದೆ ಹೋರಾಟದ ಹುಚ್ಚು/
ಚರಿತ್ರೆಯಲ್ಲಿ ಮೊಳಗಲಿ
ಬಿಕೆ ಯವರ ಕ್ರಾಂತಿ ಚಳುವಳಿ//
ಹೋರಾಟದ ಹಣತೆ ಕೃಷ್ಣಪ್ಪ
ಜೈ ಭೀಮ್ ಘೋಷಣೆ ನೀನಪ್ಪಾ//2//



■ ರಚನೆ: ಬೂದೆಪ್ಪ ಮ್ಯಾತ್ರಿ ಗಬ್ಬೂರು
ಕಲಾವಿದರು , ತಮಟೆವಾದಕರು,
ಹೋರಾಟಗಾರರು.

### ಪ್ರಧಾನಿ ನರೇಂದ್ರ ಮೋದಿ ದೇಶದ ಚುನಾಯಿತ ದೀರ್ಘ ಅವಧಿ ಸೇವೆ

# ಬಿಜೆಪಿ ಅಭಿಮಾನಿಗಳಿಂದ ಅನ್ನ ಸಂತರ್ಪಣೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.10**-ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಜಿ ಅವರು, ದೇಶದ ಚುನಾಯಿತ ದೀರ್ಘ ಅವಧಿ ಸೇವೆ ಸಲ್ಲಿಸಿದ ಪ್ರಯುಕ್ತ ಬುಧವಾರ ನಗರದ ಸ್ಟೇಷನ್ ರಸ್ತೆಯಲ್ಲಿನ ಮಳಿಗೆಯೊಂದರಲ್ಲಿ ಅನ್ನ ಸಂತರ್ಪಣೆ ಮಾಡುವ ಕಾರ್ಯಕ್ರಮವನ್ನು ಅರ್ಥಗರ್ಭಿತವಾಗಿ ಆಚರಿಸಲಾಯಿತು.

ಈ ವೇಳೆ ಭಾಗವಹಿಸಿದ್ದ ರಾಜ್ಯ ಬಿಜೆಪಿ ಕಾರ್ಯಕಾರಣಿ ಸದಸ್ಯ ಮಹೇಶ್ ರೆಡ್ಡಿ ಮುದ್ನಾಳ್ ಅನ್ನ ಸಂತರ್ಪಣೆಗೆ ಚಾಲನೆ ನೀಡಿ ಮಾತನಾಡಿ, ದೇಶದ ಹೆಮ್ಮೆಯ ಪ್ರಧಾನಿಗಳಾದ ನರೇಂದ್ರ ಮೋದಿಯವರು ಅತೀ ಹೆಚ್ಚು ದಿನಗಳ ಕಾಲ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಮಂತ್ರಿಯಾಗಿ ಅವಿಸ್ಮರಣೀಯ ಗೌರವಕ್ಕೆ ಪಾತ್ರರಾಗಿದ್ದಾರೆ.

ಸುಮಾರು 12 ವರ್ಷಗಳಲ್ಲಿ ದೇಶದ ಮೂಲಸೌಕರ್ಯ,ದೇಶದ ಗಡಿ ರಕ್ಷಣೆ, ಡಿಜಿಟಲ್ ಪರಿವರ್ತನೆ, ರೈತರ ಸಮಾಜ ಮುಖಿ ಕಾರ್ಯಕ್ರಮಗಳು ಸೇರಿದಂತೆ ದೇಶದ ಜನತೆ ಮೆಚ್ಚುವಂತ ಕಾರ್ಯ ಮಾಡಿದ್ದಾರೆ ಎಂದರು.

ಕಾರ್ಯಕ್ರಮದ ಮುಖ್ಯ ಆಯೋಜಕರಾದ ಅಂಬ್ರೇಶ್ ಸ್ವಾಮಿ, ಜಗದೀಶ್ ದಾಸನಕೇರಿ ಮಾತನಾಡಿ, ದೇಶದ ಸುಭದ್ರ ಜನತೆಯ ರಕ್ಷಣೆಗೆ ಪಣವಾಗಿ ನಿಂತು, ಭದ್ರತೆಯ ಹೆಜ್ಜೆಯನಿಟ್ಟು, ದೇಶದ ಹೆಮ್ಮೆಯ ಜನತೆಯ ಪ್ರಧಾನಿ ನರೇಂದ್ರ ಮೋದಿ.ಜಿ ಯವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ದೇಶ ಸೇವೆಯನ್ನು ಇನ್ನಷ್ಟು ಗಟ್ಟಿಗೊಳಿಸುವ ಕಾರ್ಯ ಆ ಭಗವಂತ ಯಶಸ್ವಿಯಾಗಿ ಮುಂದುವರಿಸುವ ಶಕ್ತಿ ನೀಡಲಿ ಎಂದರು.

ಈ ಸಂಧರ್ಭದಲ್ಲಿ ಲಕ್ಷ್ಮಿಪುತ್ರ ಮಾಲಿ ಪಾಟೀಲ್,ಅಜಯ್ ಮಡ್ಡಿ, ಶಿವುಗೌಡ,ಶ್ರೀಕಾಂತ ಸುಂಗಲ್ ಕರ್, ಆನಂದ್ ಮ್ಯಾಗೇರಿ,ಸೇರಿದಂತೆ ಇನ್ನಿತರ ಅಭಿಮಾನಿಗಳು ಭಾಗವಹಿಸಿದ್ದರು.

# ಸಾರಾಯಿ ಅಂಗಡಿ ಬೇಡ ವಸತಿ ಶಾಲೆ ಬೇಕೆಂದು ಹೋರಾಡಿದ ಮಹಾ ಚೇತನ ಪ್ರೊ.ಬಿ.ಕೃಷ್ಣಪ್ಪ : ಮೌನೇಶ ಮುರಾರಿ ಅಭಿಮತ



■ ಕನ್ನಡ ಮಾತೃ ಭೂಮಿ ವಾರ್ತೆ

**ಮಸ್ಕಿ,ಜೂ.10**-ದೀನ-ದಲಿತರು ಮತ್ತು ಭೂ ರಹಿತರಿಗೆ ಭೂಮಿಯ ಹಕ್ಕು ಸಿಗಬೇಕೆಂದು,ಸಾರಾಯಿ ಅಂಗಡಿ ಬೇಡ ಹೋಬಳಿಗೊಂದು ವಸತಿ ಶಾಲೆ ಬೇಕೆಂದು ರಾಜ್ಯಾದ್ಯಂತ ಬೃಹತ್ ರ್‍ಯಾಲಿಗಳನ್ನು,ಭೂಹೋರಾಟಗಳನ್ನು ಕೈಗೊಂಡವರು ಪ್ರೊ.ಬಿ.ಕೃಷ್ಣಪ್ಪ ನವರು ಎಂದು ಮಸ್ಕಿ ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಮೌನೇಶ ಮುರಾರಿ ತಿಳಿಸಿದರು.

ಪಟ್ಟಣದ ಗಾಂಧಿನಗರದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನವನದಲ್ಲಿ ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕರಾದ ಪ್ರೊ.ಬಿ.ಕೃಷ್ಣಪ್ಪ ಅವರ 88ನೇ ಜನ್ಮದಿನದ ಗೌರವಪೂರ್ವಕವಾಗಿ ಅಂಬೇಡ್ಕ್ರ ಪ್ರತಿಮೆಗೆ ಹಾಗೂ ಪ್ರೊ.ಬಿ.ಕೃಷ್ಣಪ್ಪ ಅವರ ಭಾವಚಿತ್ರಕ್ಕೆ ಹಲವಾರು ಹಿರಿಯ ಮುಖಂಡರು ಹಾಗೂ ಹೋರಾಟಗಾರರ ನೇತೃತ್ವದಲ್ಲಿ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಮಾತನಾಡಿದರು.

ಅದೇ ರೀತಿ ಹಿರಿಯ ದಲಿತ ಸಾಹಿತಿ ಸಿ.ದಾನಪ್ಪ ನಿಲೋಗಲ್ ಅವರು ಮಾತನಾಡಿ,ಕೃಷ್ಣಪ್ಪ ನವರ ಹೋರಾಟದ ಬದುಕು ಇಂದಿನ ಯುವಜನತೆಗೆ ಮಾದರಿಯಾಗಿದೆ ಹಾಗೂ ಮಕ್ಕಳು ಹಾಗೂ ಯುವಕರಿಗೆ ಸಾಮಾಜಿಕ ಜಾಗೃತಿ,ಶಿಕ್ಷಣ ಮತ್ತು ಸಮಾನತೆಯ ಮಹತ್ವದ ಕುರಿತು ಅರಿವು ಮೂಡಿಸಿದ ಮಹಾನ್ ನಾಯಕ ಎಂದು ತಿಳಿಸಿದರು.

ತದನಂತರ ದೊಡ್ಡಪ್ಪ ಮುರಾರಿ ಮಾತನಾಡಿ ಸಮಾಜದಲ್ಲಿದ್ದ ಜಾತೀಯತೆ,ಅಸ್ಪೃಶ್ಯತೆ ಹಾಗೂ ದೇವದಾಸಿ ಪದ್ಧತಿಯಂತಹ ಅನಿಷ್ಟ ಆಚರಣೆಗಳ ವಿರುದ್ಧ ತೀವ್ರವಾಗಿ ಹೋರಾಡಿದ ಮಹಾನ್ ರಾಷ್ಟ್ರ ನಾಯಕ ಕೃಷ್ಣಪ್ಪ ನವರು ಎಂದು ಅಭಿಪ್ರಾಯಪಟ್ಟರು.

ಈ ವೇಳೆ ಪುರಸಭೆ ಸದಸ್ಯರಾದ ದೊಡ್ಡ ಕರಿಯಪ್ಪ ಮುರಾರಿ,ದುರ್ಗಾಪ್ರಸಾದ್ ತೋರಣದಿನ್ನಿ,ಪ್ರಶಾಂತ ಮುರಾರಿ, ಕಾಶಿಮಪ್ಪ ಡಿ ಮುರಾರಿ,ಬಾಲಸ್ವಾಮಿ ಜಿನ್ನಾಪೂರ, ಮರಿಸ್ವಾಮಿ ಬೆನಕನಾಳ,ಯಮನಪ್ಪ ಚಲುವಾದಿ,ಸದ್ದಾಂ ಮಸ್ಕಿ ಸೇರಿದಂತೆ ಹಲವಾರು ಪ್ರೊ.ಬಿ.ಕೃಷ್ಣಪ್ಪನವರ ಅಭಿಮಾನಿಗಳು, ಮುಖಂಡರು,ಕಾರ್ಯಕರ್ತರು ಸೇರಿದಂತೆ ಸಾರ್ವಜನಿಕರು ಭಾಗವಹಿಸಿದ್ದರು.

# ಕರವೇ ರಾಜ್ಯಾಧ್ಯಕ್ಷರು ಹುಟ್ಟು ಹಬ್ಬಕ್ಕೆ ಅನ್ನದಾನ ಕಾರ್ಯಕ್ರಮ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಾಗೇಪಲ್ಲಿ,ಜೂ.10**-ಬಾಗೇಪಲ್ಲಿ(ಭಾಗ್ಯನಗರ ) ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿಎ ನಾರಾಯಣಗೌಡರ ಹುಟ್ಟು ಹಬ್ಬದ ಅಂಗವಾಗಿ ಬಾಗೇಪಲ್ಲಿ ಕರವೇ ತಾಲೂಕು ಘಟಕದ ವತಿಯಿಂದ ಸಾರಿಗೆ ಬಸ್ ನಿಲ್ದಾಣ ಮುಂಭಾಗ ಅನ್ನದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ತಾಲೂಕು ಅಧ್ಯಕ್ಷ ಹರೀಶ್ ಕೆ.ಎನ್ ನಮ್ಮ ರಾಜ್ಯಾಧ್ಯಕ್ಷರಾದ ಟಿಎ ನಾರಾಯಣಗೌಡ್ರು ಕನ್ನಡ ಪರವಾಗಿ ಸುಮಾರು 40 ವರ್ಷಗಳಿಂದ ಹೋರಾಟಗಳನ್ನ ಮಾಡುತ್ತಾ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾಗಿ 27 ವರ್ಷಗಳಿಂದ ಯಶಸ್ವಿಯಾಗಿ ಸಂಘಟನೆಯನ್ನು ಮುನ್ನಡೆಸಿಕೊಂಡು ಹೋಗುತ್ತಿದ್ದು ಈ ನಾಡಿಗೆ ಯಾವುದೇ ಭಾಗದಲ್ಲಿ ಕುತ್ತಾದ್ರು ತೊಂದರೆಯಾದರೂ ಆ ಭಾಗಕ್ಕೆ ಹೋರಾಟವನ್ನು ತಗೊಂಡು ಹೋಗಿ ಸರ್ಕಾರಗಳಿಗೆ ಹಾಗಿಂದಾಗೆ ಎಚ್ಚರಿಕೆಯನ್ನು ಕೊಡುತ್ತಾ ನನ್ನಂತ



ಸಾವಿರಾರು ಲಕ್ಷಾಂತರ ಯುವಕರಿಗೆ ಕನ್ನಡ ದೀಕ್ಷೆಯನ್ನು ಕೊಡುತ್ತಾ ಕರ್ನಾಟಕದಲ್ಲಿ ಇವತ್ತು ಕನ್ನಡ ಉಳಿಲಿಕ್ಕೆ ಕಾರಣವೇ ನಮ್ಮ ರಾಜ್ಯದ ಟಿಎ ನಾರಾಯಣಗೌಡರು ಅಂತವರ ಹುಟ್ಟುಹಬ್ಬದ ಅಂಗವಾಗಿ ಪ್ರತಿ ವರ್ಷ ವಿಶೇಷವಾಗಿ ಕಾರ್ಯಕ್ರಮಗಳನ್ನು ರೂಪಸುತ್ತಾ ಬರುತ್ತಿದ್ದೇವೆ ಹಿಂದಿನ ವರ್ಷ ನಾವು ಆಸ್ಪತ್ರೆಯಲ್ಲಿ ಹಣ್ಣು ಹಂಪಲು , ಒಂದು ವರ್ಷ ಅನ್ನದಾನ ಕಾರ್ಯಕ್ರಮ ಮಾಡಿದ್ದೇವೆ , ಒಂದು ವರ್ಷ ನಾವು ಅನಾಥಾಶ್ರಮದಲ್ಲಿ ಅನ್ನದಾನ ಕಾರ್ಯಕ್ರಮವನ್ನು ಮಾಡಿದ್ದೇವೆ , ಮತ್ತೊಂದು ವರ್ಷ ನಾವು ಗಿಡ ನೆಡುವಂತಹ ಕಾರ್ಯಕ್ರಮವನ್ನು ಮಾಡಿದ್ದೇವೆ ಶಂಕರ್ ನೇತ್ರಾಲಯ ಅವರ ನೇತೃತ್ವದಲ್ಲಿ ರಕ್ತದಾನ ಶಿಬಿರ ಮಾಡಿ ಒಂದಲ್ಲ ಒಂದು ಕಾರ್ಯಕ್ರಮ ಮಾಡಿ ಸಮಾಜಮುಖಿ ಕಾರ್ಯಕ್ರಮ ಮುಖಾಂತರ ನಮ್ಮ ರಾಜ್ಯ ಅಧ್ಯಕ್ಷರ ಹುಟ್ಟು ಹಬ್ಬ ಆಚರಣೆ ಮಾಡುವುದು ನಮಗೂ ಹೆಮ್ಮೆ ಇದೆ. ಇಂತಹ ಕನ್ನಡ ವರಪುತ್ರರು ಇನ್ನೂ ಈ ರಾಜ್ಯದಲ್ಲಿ ಹುಟ್ಟಿ ಬರಬೇಕು ಇವರಿಗೆ ತಾಯಿ ಭುವನೇಶ್ವರಿ ನೂರು ಕಾಲ ಆಯಸ್ಸು ಕೊಟ್ಟು ಕಾಪಾಡಲಿ ಎಂದು ದೇವರಲ್ಲಿ ವಿನಂತಿಸಿದರು.

ಈ ಸಂಧರ್ಭದಲ್ಲಿ ಗೌರವಾಧ್ಯಕ್ಷರಾದ ಫೈನಾನ್ಸ್ ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ರಿಯಾಜ್‌ಉಲ್ಲಾ. ಉಪಾಧ್ಯಕ್ಷರಾದ ಅಲೀಮ್, ಜಿಲ್ಲಾ ಮಹಿಳಾ ಅಧ್ಯಕ್ಷರು ಶ್ರೀಮತಿ ಸುಜಾತಮ್ಮ, ಕಾರ್ಯದರ್ಶಿ ಮಂಜುನಾಥನಾಯ್ಕ, ಸಂಘಟನಾ ಕಾರ್ಯದರ್ಶಿ ಶಂಕರ್, ಖಜಾಂಚಿ ನಾರಾಯಣಸ್ವಾಮಿ, ಜಿಲ್ಲಾ ಉಪಾಧ್ಯಕ್ಷರು ರಾಮರೆಡ್ಡಿ, ನಗರ ಅಧ್ಯಕ್ಷರು ಜಾನಿ, ಸಂಚಾಲಕರು ಶಿವಕುಮಾರ್, ರಸ್ತೆ ಬದಿ ಅಧ್ಯಕ್ಷರು ವೆಂಕಟೇಶ್, ಮಹಿಳಾ ಘಟಕ ಉಪಾಧ್ಯಕ್ಷರು ಜರೀನಮ್ಮ, ಮಹಿಳಾ ಘಟಕ ಕಾರ್ಯದರ್ಶಿ ಅರುಣಮ್ಮ, ರಾಧಿಕಾ, ಜಯಮ್ಮ, ಶಾಂತಮ್ಮ, ರತ್ನಮ್ಮ. ಪದ್ಮಮ್ಮ, ಕಾರ್ಮಿಕ ಘಟಕ ಅಧ್ಯಕ್ಷರು ಗಂಗರಾಜು, ಅನ್ವರ್, ಬಾಬಾಜಾನ್, ಜಿಲ್ಲಾ ಸಂಚಾಲಕರು ನರಸಿಂಹಮೂರ್ತಿ, ವಿದ್ಯಾರ್ಥಿ ಘಟಕ ಅಧ್ಯಕ್ಷ ಗಂಗರಾಜು, ಷಂಷೀರ್, ರಾಮಾಂಜಿ, ರಾಜು , ನಗರ ಘಟಕ ಉಪಾಧ್ಯಕ್ಷರು ಅನಿಲ್ ಕುಮಾರ್, ಚೇತನ್, ಇರ್ಷಾದ್, ಶ್ರೀನಿವಾಸ,ಮುಂತಾದವರು ಹಾಜರಿದ್ದರು.

# ಜೂ. 29ರಿಂದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ: ರಾಜಕೀಯ ಪಕ್ಷಗಳು, ಸಾರ್ವಜನಿಕರ ಸಹಕಾರ ಅಗತ್ಯ ಸುರೇಶ್ ಕುಮಾರ್



■ ಕನ್ನಡ ಮಾತೃ ಭೂಮಿ ವಾರ್ತೆ

**ಹರಪನಹಳ್ಳಿ,ಜೂ.10**-ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯವು ಜೂನ್ 29ರಿಂದ ಜುಲೈ 30ರವರೆಗೆ ನಡೆಯಲಿದ್ದು, ರಾಷ್ಟ್ರೀಯ ರಾಜಕೀಯ ಪಕ್ಷಗಳ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಈ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಉಪ ವಿಭಾಗಾಧಿಕಾರಿ ಸುರೇಶ್ ಕುಮಾರ್ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ತಾಲೂಕು ಆಡಳಿತ ವತಿಯಿಂದ ಆಯೋಜಿಸಿದ್ದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತ ಬೂತ್ ಮಟ್ಟದ ಏಜೆಂಟರು ಮತ್ತು ಅಧಿಕಾರಿಗಳ ತರಬೇತಿ ಶಿಬಿರದಲ್ಲಿ ಅವರು ಮಾತನಾಡಿದರು.

ಜೂನ್ 30ರಿಂದ ಮತದಾರರ ಸಮಗ್ರ ಪಟ್ಟಿ ಪರಿಷ್ಕರಣೆ ಆರಂಭವಾಗಲಿದ್ದು, ಬಿಎಲ್ಒಗಳು ತಮ್ಮ ಮತಗಟ್ಟೆ ವ್ಯಾಪ್ತಿಯ ಪ್ರತಿಯೊಬ್ಬ ಮತದಾರರ ಮನೆಗೆ ಮೂರು ಬಾರಿ ಭೇಟಿ ನೀಡಿ ಗಣತಿ ಅರ್ಜಿಗಳನ್ನು ವಿತರಿಸಿ, ಭರ್ತಿ ಮಾಡಿಸಿ ಮತದಾರರ ಪಟ್ಟಿಗೆ ದಾಖಲಿಸಬೇಕು ಎಂದು ಸೂಚಿಸಿದರು.

ಈಗಾಗಲೇ ತರಬೇತಿ ಪಡೆದಿರುವ ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂನ್ 29ರಿಂದ ಮನೆಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ.

ಕರಡು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಎಲ್ಲರೂ ಸಜ್ಜಾಗಬೇಕು. ನಿಗದಿಯಂತೆ ಜೂನ್ 30ರಿಂದ ಜುಲೈ 22ರೊಳಗೆ ಈ ಕಾರ್ಯವನ್ನು ಪೂರ್ಣಗೊಳಿಸಲು ಶ್ರಮವಹಿಸಬೇಕು ಎಂದು ತಿಳಿಸಿದರು.

ಮತದಾರರು ಗಣತಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಜೊತೆಗೆ 2002ರ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಣಿಯಾಗಿರುವ ದಾಖಲೆಗಳನ್ನು ಒದಗಿಸಬೇಕಿದೆ. ಈ ಸಂಬಂಧ ಬೂತ್ ಮಟ್ಟದ ಅಧಿಕಾರಿಗಳು ಮ್ಯಾಪಿಂಗ್ ಕಾರ್ಯದ ಮೂಲಕ ಗಣತಿ ನಡೆಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಬಿ.ವಿ. ಗಿರೀಶ್ ಬಾಬು, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್. ಲೇಪಕ್ಷಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಪೂಜಾರ್ ಕೃಷ್ಣನಾಯ್ಕ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಲಾಠಿ ದಾದಾಪೀರ್, ನಗರಸಭೆ ಮಾಜಿ ಉಪಾಧ್ಯಕ್ಷ ವಸಂತಪ್ಪ, ವಕೀಲ ಟಿ. ವೆಂಕಟೇಶ್,

ಪುರಸಭೆ ಮಾಜಿ ಸದಸ್ಯ ರೆಹಮಾನ್ ಸಾಹೇಬ್, ಹುಲಿಕಟ್ಟೆ ಚಂದ್ರಪ್ಪ, ಇಷ್ಮಾಯಿಲ್ ಎಲಿಗಾರ್, ಅಶೋಕ್ ಅಗ್ರಹಾರ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಕಾರ್ಯಕರ್ತರು, ತರಬೇತಿ ಅಧಿಕಾರಿಗಳು ಹಾಗೂ ಬಿಎಲ್ಎ ಮತ್ತು ಬಿಎಲ್ಒ ಅಧಿಕಾರಿಗಳು ಉಪಸ್ಥಿತರಿದ್ದರು.

### ನಾಗೇಂದ್ರರಿಗೆ ಸಚಿವ ಸ್ಥಾನ ನೀಡಿ ಎಂದು ವರಿಷ್ಠರಿಗೆ ಬಳ್ಳಾರಿಯಿಂದ ಸಂದೇಶ

# ನಾಗೇಂದ್ರ ಪರ ಬೃಹತ್ ಮೆರವಣಿಗೆ-ಡಿಕೆಶಿ, ಸಿದ್ದರಾಮಯ್ಯಗೆ ಮನವಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,ಜೂ.10**-ಶಾಸಕ ಬಿ.ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಅವರ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ನಗರದಲ್ಲಿ ಬುಧವಾರ ಬೃಹತ್ ಮೆರವಣಿಗೆ ನಡೆಸಿದರು.

ನಗರದ ಕಾಗೆ ಪಾರ್ಕ್‌ನಿಂದ ಗಡಿಗಿ ಚೆನ್ನಪ್ಪ ವೃತ್ತದವರೆಗೆ ನಡೆದ ಮೆರವಣಿಗೆಯಲ್ಲಿ ಭಾಗವಹಿಸಿದ ಮುಖಂಡರು ಮತ್ತು ಕಾರ್ಯಕರ್ತರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷದ ವರಿಷ್ಠರು ಬಳ್ಳಾರಿ ಜಿಲ್ಲೆಯ ಅಭಿವೃದ್ಧಿ ಮತ್ತು ಪಕ್ಷದ ಸಂಘಟನೆ ಬಲವರ್ಧನೆ ದೃಷ್ಟಿಯಿಂದ ಬಿ.ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸುವಲ್ಲಿ ಹಾಗೂ ಕಾರ್ಯಕರ್ತರನ್ನು ಒಗ್ಗೂಡಿಸುವಲ್ಲಿ ನಾಗೇಂದ್ರ ಅವರ ಪಾತ್ರ ಮಹತ್ವದ್ದಾಗಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪಕ್ಷದ ಸಾಧನೆಗೆ ಅವರ ನೇತೃತ್ವ ನೆರವಾಗಲಿದೆ ಎಂದು ಮುಖಂಡರು ಅಭಿಪ್ರಾಯಪಟ್ಟರು.

ನಾಗೇಂದ್ರ ಅವರು ಜಿಲ್ಲೆಯ ಜನರೊಂದಿಗೆ ನಿಕಟ



ಸಂಪರ್ಕ ಹೊಂದಿರುವ ಜನನಾಯಕರು. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅವರ ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಗನಕಲ್ಲು ವಿಜಯಕುಮಾರ್, ವೈ.ಶಿವಕುಮಾರ್, ಮಹಾನಗರ ಪಾಲಿಕೆ ಸದಸ್ಯ ನಾಗಲಕೆರೆ ಗೋವಿಂದ, ಮುದಿ ಮಲ್ಲಯ್ಯ, ನಾಗಭೂಷಣಗೌಡ, ಬಿ.ಎಂ. ಪಾಟೀಲ್, ಮಲ್ಲಿಕಾರ್ಜುನ, ಮಲ್ಲೇಶ್ವರಿ, ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ವೀರನಗೌಡ, ಅಮರಾಪುರ ಗಾದಿಲಿಂಗ, ಅಸುಂಡಿ ಹನುಮೇಶ್, ಅರುಣ್, ರಾಮಾಂಜನಿ, ಅಕ್ಕಿ ಶಿವಕುಮಾರ್, ದಿವಾಕರ್, ಮೀನಳ್ಳಿ ವೆಂಕಟೇಶಣ್ಣ, ಗಂಗಾಧರ, ದುರ್ಗಾಪ್ರಸಾದ್, ಕನಕ, ದಾರದಮಿಲ್ಲಾ ಲೋಕೇಶ್, ವೀರಸೇನಾ ರೆಡ್ಡಿ, ಶ್ರೀಶೈಲ, ಹೊನ್ನೂರಪ್ಪ, ಜೋಗಿನ ಚಂದ್ರಪ್ಪ, ಜೋಗಿನ ವಿಜಯಕುಮಾರ್, ಗಣೇಶ್, ಲಿಂಗರಾಜ್, ಹನುಮಂತ, ಭೀಮ, ಕೋಟೆ ರವಿಕುಮಾರ್ ಸೇರಿದಂತೆ ಹಲವು ಮುಖಂಡರು ಹಾಗೂ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಮನನೆಗೂ ಭರತ್ ಸಲಾಂ ಬಳ್ಳಾರಿ ಅಭಿಯಾನ: ಸಾರ್ವಜನಿಕರ ಕುಂದುಕೊರತೆ ಆಲಿಸಿದ ಶಾಸಕ ನಾರಾ ಭರತ್ ರೆಡ್ಡಿ, ಕಿಚನ್ ಸೆಟ್‌ಗಳ ವಿತರಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ, ಜೂ.10**-ಬಳ್ಳಾರಿ ನಗರದ ಸಮಗ್ರ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸುವ ಉದ್ದೇಶದಿಂದ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಇಂದು ನಗರದ 14ನೇ ವಾರ್ಡಿನಲ್ಲಿ ಹಮ್ಮಿಕೊಂಡಿದ್ದ ಮನನೆಗೂ ಭರತ್ ಸಲಾಂ ಬಳ್ಳಾರಿ ಜನಸಂಪರ್ಕ ಅಭಿಯಾನದಲ್ಲಿ ಭಾಗವಹಿಸಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿದರು.

ಅಭಿಯಾನದ ಅಂಗವಾಗಿ ವಾರ್ಡಿನ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿದ ಶಾಸಕ ಭರತ್ ರೆಡ್ಡಿ ಅವರು ಸ್ಥಳೀಯ ನಿವಾಸಿಗಳೊಂದಿಗೆ ನೇರವಾಗಿ ಸಂವಾದ ನಡೆಸಿ ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ, ಸ್ವಚ್ಛತೆ ಹಾಗೂ ಇತರೆ ನಾಗರಿಕ ಸೌಲಭ್ಯಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು. ಸಾರ್ವಜನಿಕರು ಸಲ್ಲಿಸಿದ ಮನವಿಗಳನ್ನು ಪರಿಶೀಲಿಸಿದ ಅವರು, ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜನರ ಮನೆಬಾಗಿಲಿಗೆ ತೆರಳಿ ಅವರ ಸಮಸ್ಯೆಗಳನ್ನು



ತಿಳಿದುಕೊಳ್ಳುವುದು ಜನಪ್ರತಿನಿಧಿಯಾಗಿ ತಮ್ಮ ಕರ್ತವ್ಯವಾಗಿದ್ದು, ನಗರದ ಪ್ರತಿಯೊಂದು ವಾರ್ಡಿನ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜನರ ನಿರೀಕ್ಷೆಗಳಿಗೆ ತಕ್ಕಂತೆ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಯಾವುದೇ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಹಂತ ಹಂತವಾಗಿ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು.

ಅಭಿಯಾನದ ವೇಳೆ ವಾರ್ಡಿನ ಅರ್ಹ ಫಲಾನುಭವಿಗಳಿಗೆ ಕಿಚನ್ ಸೆಟ್‌ಗಳನ್ನು ವಿತರಿಸಿ ಮಾತನಾಡಿದ ಶಾಸಕರು, ಸಮಾಜದ ಆರ್ಥಿಕವಾಗಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುತ್ತಿದ್ದು, ಜನರ ಜೀವನಮಟ್ಟ ಸುಧಾರಣೆಗೆ ಅಗತ್ಯ ನೆರವು ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರು, ವಾರ್ಡ್ ಪ್ರತಿನಿಧಿಗಳು, ಪಕ್ಷದ ಕಾರ್ಯಕರ್ತರು ಹಾಗೂ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು. ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು,

ಜನರೊಂದಿಗೆ ನೇರ ಸಂಪರ್ಕ ಸಾಧಿಸುವ ಇಂತಹ ಕಾರ್ಯಕ್ರಮಗಳು ಸಮಸ್ಯೆಗಳ ತ್ವರಿತ ಪರಿಹಾರಕ್ಕೆ ಸಹಕಾರಿಯಾಗುತ್ತವೆ ಎಂದು ನಾಗರಿಕರು ಅಭಿಪ್ರಾಯಪಟ್ಟರು.

# ನಾರಿ ಜೀವನ ಮೂರನೇ ಹಂತದ ಉಚಿತ ತರಬೇತಿ ಶಿಬಿರಕ್ಕೆ ಚಾಲನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,ಜೂ.10**-ಮಹಿಳಾ ಸಬಲೀಕರಣ ಮತ್ತು ಸ್ವಾವಲಂಬನೆಗೆ ಉತ್ತೇಜನ ನೀಡುವ ಉದ್ದೇಶದಿಂದ ವಿಶ್ವ ಭಾರತಿ ಕಲಾನಿಕೇತನ ಹಾಗೂ ಶಿಕ್ಷಣ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ನಾರಿ ಜೀವನ' ಮೂರನೇ ಹಂತದ ಉಚಿತ ತರಬೇತಿ ಶಿಬಿರಕ್ಕೆ ನಗರದ ಹವಂಬಾವಿ ರಸ್ತೆಯ ಗಾಜಿನ ಮಂದಿರದಲ್ಲಿ ಮಂಗಳವಾರ ಚಾಲನೆ ನೀಡಲಾಯಿತು.

ಶಿಬಿರವನ್ನು ಶಾಸಕ ಗಾಲಿ ಜನಾರ್ಧನ ರೆಡ್ಡಿ ಹಾಗೂ ಅವರ ಪತ್ನಿ ಗಾಲಿ ಲಕ್ಷ್ಮಿ ಅರುಣ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಹಿಳೆಯರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿಗಳು ಅಗತ್ಯವಾಗಿದ್ದು, ಸ್ವಯಂ ಉದ್ಯೋಗದ ಮೂಲಕ ಮಹಿಳೆಯರು ಆತ್ಮವಿಶ್ವಾಸದಿಂದ ಬದುಕು ಕಟ್ಟಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರದ 12 ವರ್ಷಗಳ ಆಡಳಿತದ ಸಾಧನೆಗಳನ್ನು ಸ್ಮರಿಸಿ ಅಭಿನಂದಿಸಲಾಯಿತು. ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಜನರಿಂದ ಚುನಾಯಿತರಾಗಿ ಅತ್ಯಂತ ದೀರ್ಘಾವಧಿಗೆ ಪ್ರಧಾನಮಂತ್ರಿಯಾಗಿ ಹೊಸ ದಾಖಲೆ ನಿರ್ಮಿಸಿರುವುದಕ್ಕಾಗಿ ಅವರಿಗೆ ಶುಭಾಶಯ



ಕೋರಲಾಯಿತು.

ಇದಕ್ಕೂ ಮುನ್ನ ಗ್ರಾಮ ದೇವತೆ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಗಾಲಿ ಲಕ್ಷ್ಮಿ ಅರುಣ ಅವರು ವಿಶೇಷ ಪೂಜೆ ಸಲ್ಲಿಸಿ, ಪ್ರಧಾನಿ ಮೋದಿ ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಇನ್ನಷ್ಟು ಶಕ್ತಿಯಿಂದ ದೇಶಸೇವೆ ಮುಂದುವರಿಸಲು ಪ್ರಾರ್ಥಿಸಿದರು.

ನಾರಿ ಶಕ್ತಿ ದೇಶದ ಶಕ್ತಿ' ಎಂಬ ಧ್ಯೇಯವಾಕ್ಯದಂತೆ ಆಯೋಜಿಸಿರುವ ಈ ಶಿಬಿರದಲ್ಲಿ ಮಹಿಳೆಯರಿಗೆ ಸ್ವಯಂ ಉದ್ಯೋಗ, ಕೌಶಲ್ಯಾಭಿವೃದ್ಧಿ ಮತ್ತು ಆರ್ಥಿಕ ಸ್ವಾವಲಂಬನೆಗೆ ಅಗತ್ಯವಾದ ವಿವಿಧ ತರಬೇತಿಗಳನ್ನು ನೀಡಲಾಗುವುದು ಎಂದು ಆಯೋಜಕರು ತಿಳಿಸಿದರು.

ನಾರಿ ಜೀವನ' ಕಾರ್ಯಕ್ರಮವು ಮಹಿಳೆಯರಲ್ಲಿ ಆತ್ಮವಿಶ್ವಾಸ ಬೆಳೆಸಿ, ಸ್ವಾವಲಂಬಿ ಬದುಕಿನತ್ತ ಸಾಗಲು ಪ್ರೇರಣೆ ಮತ್ತು ಮಾರ್ಗದರ್ಶನ ನೀಡಲಿದ್ದು, ಮಹಿಳಾ ಸಬಲೀಕರಣದ ದಿಸೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ.

ಕಾರ್ಯಕ್ರಮದಲ್ಲಿ ಮೆಹಂದಿ ಕಲಾವಿದ ನರೇಶ್ ಸೇರಿದಂತೆ ನೂರಾರು ಮಹಿಳೆಯರು, ಭಾರತೀಯ ಜನತಾ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಟಿಎಂಸಿಗೆ ಮತ್ತೊಂದು ಆಘಾತ: ರಾಜ್ಯಸಭಾ ಸಂಸದ ಸ್ಥಾನಕ್ಕೆ ಸುಶ್ಮಿತಾ ದೇವ್ ರಾಜೀನಾಮೆ

**ಕೋಲ್ಕತ್ತಾ (ಪಶ್ಚಿಮ ಬಂಗಾಳ),ಜೂ.10-** ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆ ಬಳಿಕ ತೃಣಮೂಲ ಕಾಂಗ್ರೆಸ್‌ನಲ್ಲಿ ಬಂಡಾಯ ಹೆಚ್ಚಾಗಿದ್ದು, ವಿಧಾನಸಭೆ, ಲೋಕಸಭೆ ಬಳಿಕ ಇದೀಗ ರಾಜ್ಯಸಭಾ ಸಂಸದರಿಂದಲೂ ಭಿನ್ನಮತಗಳು ಭುಗಿಲೆದ್ದಿವೆ. ಹಿರಿಯ ನಾಯಕ ಸುಖೇಂದು ಶೇಖರ್ ರಾಯ್ ಬಳಿಕ ಸುಶ್ಮಿತಾ ದೇವ್ ಕೂಡ ರಾಜ್ಯಸಭೆ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಈ ಮೂಲಕ ಮಮತಾ ಬ್ಯಾನರ್ಜಿ ಪಕ್ಷದಲ್ಲಿ ಸಾಕಷ್ಟು ಬಿರುಕು ಮೂಡಿದೆ.

ಕಾಂಗ್ರೆಸ್ ನಾಯಕ ಸಂತೋಷ್ ಮೋಹನ್ ದೇವ್ ಅವರ ಪುತ್ರಿ ಸುಶ್ಮಿತಾ ದೇವ್ ಅವರು ತಮ್ಮ ರಾಜೀನಾಮೆಯನ್ನು ಸಲ್ಲಿಸಿದ್ದಾರೆ. ಈ ರಾಜೀನಾಮೆ ಪರ್ವಗಳು ತೃಣಮೂಲ ಪಕ್ಷದ ಉನ್ನತ ನಾಯಕತ್ವದ ವಿರುದ್ಧ ಅಸಮಾಧಾನವನ್ನು ತೋರಿಸುತ್ತಿದೆ. 2021ರ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಗೆಲುವಿನ ನಂತರ, ತೃಣಮೂಲ ಕಾಂಗ್ರೆಸ್ ರಾಷ್ಟ್ರಮಟ್ಟದಲ್ಲಿ ತನ್ನ ಹೆಜ್ಜೆಗುರುತುಗಳನ್ನು ವಿಸ್ತರಿಸಲು ಯೋಜಿಸಿತ್ತು. ಅದರಂತೆ ಚುನಾವಣಾ ತಂತ್ರಜ್ಞ ಪ್ರಶಾಂತ್ ಕಿಶೋರ್ ಅವರ ಸಲಹೆಯ ಮೇರೆಗೆ ಪಕ್ಷದ ಅಖಿಲ ಭಾರತ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ, ಅಸ್ಸಾಂನಲ್ಲಿ ಕಾಂಗ್ರೆಸ್ ಪಕ್ಷದ ಭದ್ರಕೋಟೆಯಿಂದ ಸುಶ್ಮಿತಾ ದೇವ್ ಅವರನ್ನು ತೃಣಮೂಲ ಪಕ್ಷಕ್ಕೆ ಕರೆತಂದಿದ್ದರು. ತ್ರಿಪುರ ಮತ್ತು ಅಸ್ಸಾಂನಲ್ಲಿ ಪಕ್ಷದ ಸಾಂಸ್ಥಿಕ ನೆಲೆಯನ್ನು ಬಲಪಡಿಸಲು, ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿ ಸಂಸತ್ತಿಗೆ ಕಳುಹಿಸಿಕೊಟ್ಟಿದ್ದರು.

ರಾಜಕೀಯ ವೀಕ್ಷಕರು ಗಮನಿಸುವಂತೆ ಈಶಾನ್ಯ ರಾಜ್ಯಗಳಿಗೆ ತೃಣಮೂಲ ಕಾಂಗ್ರೆಸ್ ವಿಸ್ತರಣೆಯು ಅಂತಿಮವಾಗಿ ಯಾವುದೇ ಫಲಿತಾಂಶಗಳನ್ನು ನೀಡಲಿಲ್ಲ. ಇದಕ್ಕೆ ವಿರುದ್ಧವಾಗಿ, ಬಂಗಾಳದ ಕೋಟಾದಡಿ ಬೇರೆ ರಾಜ್ಯದ ನಾಯಕನನ್ನು ರಾಜ್ಯಸಭೆಗೆ ಕಳುಹಿಸುವ ನಿರ್ಧಾರವು ಆ ಸಮಯದಲ್ಲಿ ಪಕ್ಷದ ಮತ್ತು ಹೊಸ ಬಂಗಾಳಿ ನಾಯಕರಲ್ಲಿ ತೀವ್ರ ಅಸಮಾಧಾನವನ್ನು ಹುಟ್ಟುಹಾಕಿತ್ತು.

ಲೋಕಸಭಾ ಚುನಾವಣೆಯಲ್ಲಿ ತೃಣಮೂಲ ಟಿಕೆಟ್‌ಗಳ ಮೂಲಕ ಆಯ್ಕೆಯಾದ ಕನಿಷ್ಠ 20 ಸಂಸದರು ಈಗಾಗಲೇ ಮಮತಾ ಬ್ಯಾನರ್ಜಿ ನೇತೃತ್ವದ ಬಣದಿಂದ ದೂರ ಉಳಿದಿದ್ದಾರೆ. ದೆಹಲಿಯ ಎನ್‌ಡಿಎ ಸರ್ಕಾರಕ್ಕೆ ಸೇರುವ ಇಚ್ಛೆಯನ್ನು ಅವರು ವ್ಯಕ್ತಪಡಿಸಿದ್ದಾರೆ.

ಪಶ್ಚಿಮ ಬಂಗಾಳವು ಒಟ್ಟು 16 ರಾಜ್ಯಸಭಾ ಸ್ಥಾನಗಳನ್ನು ಹೊಂದಿದ್ದು, ಅವುಗಳಲ್ಲಿ 13 ಸ್ಥಾನಗಳನ್ನು ತೃಣಮೂಲ ಕಾಂಗ್ರೆಸ್ ಹೊಂದಿತ್ತು. ಹಿರಿಯ ನಾಯಕ ಸುಖೇಂದು ಶೇಖರ್ ರಾಯ್ ಈಗಾಗಲೇ ತೃಣಮೂಲ ಕಾಂಗ್ರೆಸ್ ಮತ್ತು ತಮ್ಮ ರಾಜ್ಯಸಭಾ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪಕ್ಷದ ಆಂತರಿಕ ಗೊಂದಲಗಳ ನಡುವೆ ಸುಶ್ಮಿತಾ ದೇವ್ ರಾಜೀನಾಮೆ ನೀಡುವ ಮೂಲಕ ತೃಣಮೂಲ ಬಂಗಾಳದಿಂದ ಮತ್ತೊಂದು ರಾಜ್ಯಸಭಾ ಸ್ಥಾನವನ್ನು ಕಳೆದುಕೊಂಡಿದೆ.

## ಚೆಕ್ ಬೌನ್ಸ್ ಪ್ರಕರಣಗಳಲ್ಲಿ ದಂಡ ಪಾವತಿಸದಿದ್ದಲ್ಲಿ ಗರಿಷ್ಠ ಶಿಕ್ಷೆಗಿಂತ ಹೆಚ್ಚು ದಿನ ಜೈಲಿನಲ್ಲಿಡುವಂತಿಲ್ಲ: ಹೈಕೋರ್ಟ್

**ಬೆಂಗಳೂರು,ಜೂ.10-**ಚೆಕ್ ಬೌನ್ಸ್ ಪ್ರಕರಣಗಳಲ್ಲಿ ವಿಧಿಸಲಾದ ದಂಡವನ್ನು ಪಾವತಿಸದ ಆರೋಪಿಗೆ ವಿಧಿಸಿದ ಗರಿಷ್ಠ ಶಿಕ್ಷೆ ಎರಡು ವರ್ಷವನ್ನು ಮೀರಿ ಜೈಲಿನಲ್ಲಿ ಇರಿಸುವುದಕ್ಕೆ ಅವಕಾಶವಿಲ್ಲ ಎಂದು ಹೈಕೋರ್ಟ್ ಆದೇಶಿಸಿದೆ.

ನೆಗೋಶಿಯೇಬಲ್ ಇನ್ಸುಮೆಂಟ್ಸ್ ಕಾಯ್ದೆಯ ಸೆಕ್ಷನ್ 138ರಡಿ ದಾಖಲಾದ ಮೂರು ಚೆಕ್ ಬೌನ್ಸ್ ಪ್ರಕರಣಗಳಲ್ಲಿ ತಲಾ ಮೂರು ವರ್ಷದ ಶಿಕ್ಷೆಗೆ ಒಳಗಾಗಿದ್ದ ವ್ಯಕ್ತಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.

# ದೇಶದ ಮೊದಲ ಪ್ರಧಾನಿ ನೆಹರೂ ದಾಖಲೆ ಮುರಿದ ಮೋದಿಗೆ ಸಚಿವ ಸಂಪುಟ ಗೌರವ

## ಎದ್ದು ನಿಂತು ಚಪ್ಪಾಳೆ ತಟ್ಟಿದ ಸಚಿವರು..!



**ನವದೆಹಲಿ,ಜೂ.10-**ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರ ಆಡಳಿತ ಅವಧಿಯ ದಾಖಲೆಯಡನ್ನು ಮುರಿಯುವ ಮೂವಲ ಪ್ರಧಾನಿ ನರೇಂದ್ರ ಮೋದಿ ಅವರು ಐತಿಹಾಸಿಕ ಮೈಲಿಗಲ್ಲು ಸಾಧಿಸಿದ್ದು, ಭಾರತದ ಅತಿ ಹೆಚ್ಚು ಕಾಲ ಚುನಾಯಿತ ಪ್ರಧಾನಿಯಾಗಿ ಸೇವೆ ಸಲ್ಲಿಸಿದ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಇದು ಭಾರತೀಯ ರಾಜಕೀಯ ಇತಿಹಾಸದಲ್ಲಿ ಮಹತ್ವದ ಕ್ಷಣವಾಗಿದ್ದು, ಜವಾಹರಲಾಲ್ ನೆಹರು ಅವರ ದೀರ್ಘಾವಧಿ ಪ್ರಧಾನಿ ದಾಖಲೆಯನ್ನು ಮುರಿದ ಪ್ರಧಾನಿ ಮೋದಿಗೆ ಬುಧವಾರ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಅಭಿನಂದನಾ ನಿರ್ಣಯ ಅಂಗೀಕರಿಸಿದ್ದು, ಸಂಪುಟ ಸಹೋದ್ಯೋಗಿಗಳು ಎದ್ದುನಿಂತು ಚಪ್ಪಾಳೆ ಹೊಡೆಯುವ ಮೂಲಕ ಅಭಿನಂದಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ದೀರ್ಘಕಾಲದವರೆಗೆ ಪ್ರಧಾನಿಯಾಗಿ ಸೇವೆ ಸಲ್ಲಿಸಿದ್ದಕ್ಕಾಗಿ ಅವರನ್ನು ಶ್ಲಾಘಿಸುವ ನಿರ್ಣಯವನ್ನು ಕೇಂದ್ರ ಸಚಿವ ಸಂಪುಟ ಇಂದು ಅಂಗೀಕರಿಸಿತು.

ಮೋದಿ ಅವರು ಇಂದು(ಜೂ.10) ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲೇ ದೀರ್ಘಕಾಲ ನಿರಂತರ ಅಧಿಕಾರ ನಡೆಸಿದ ಪ್ರಧಾನಿ ಎಂಬ ಹೊಸ ದಾಖಲೆ ಬರೆದಿದ್ದಾರೆ.

ಈ ಮೂಲಕ ಮಾಜಿ ಪ್ರಧಾನಿ ಜವಾಹರಲಾಲ್ ನೆಹರೂ ಅವರ 4,398 ದಿನಗಳ ದಾಖಲೆಯನ್ನ ಮುರಿದು 4,399 ದಿನಗಳ ನಿರಂತರ ಸೇವೆಯ ಮೈಲುಗಲ್ಲು ತಲುಪಿದ್ದಾರೆ.

## ರಾಜ್ಯಸಭಾ ಸ್ಥಾನದಿಂದ ನನ್ನ ಮೋದಿ ಸಂಬಂಧ ಬೆಳೆದಿಲ್ಲ, ನಾನು ರಾಜ್ಯಸಭಾ ಆಕಾಂಕ್ಷಿಯಾಗಿರಲಿಲ್ಲ-ಹೆಚ್.ಡಿ.ದೇವೇಗೌಡ ಸ್ಪಷ್ಟನೆ

**ಬೆಂಗಳೂರು,ಜೂ.10-**ನಾನು ರಾಜ್ಯಸಭೆ ಸದಸ್ಯ ಸ್ಥಾನ ಮುಂದುವರೆಸಲು ಮನವಿ ಮಾಡಿರಲಿಲ್ಲ. ಈ ಸಂಬಂಧ ಕೇಂದ್ರದ ಯಾವುದೇ ನಾಯಕರನ್ನು ಭೇಟಿ ಮಾಡಿಲ್ಲ ಎಂದು ತಿಳಿಸಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಕಳೆದ 2014ರಿಂದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಮತ್ತು ನನ್ನ ನಡುವಿನ ಸಂಬಂಧ ಮುಂದುವರೆದಿದ್ದು, ರಾಜ್ಯಸಭಾ ಸದಸ್ಯ ಸ್ಥಾನಕ್ಕಾಗಿ ಅದು ಮುರಿದು ಬೀಳುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ನಗರದ ಜೆಡಿಎಸ್ ಕಚೇರಿ ಜೆ.ಪಿ.ಭವನದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಮೊದಲ ಬಾರಿ ನನ್ನನ್ನು ಭೇಟಿಯಾಗಿ ಚರ್ಚೆ ನಡೆಸಿದ್ದರು.



## ರಾಜ್ಯಸಭಾ ಅಭ್ಯರ್ಥಿ ಮೀನಾಕ್ಷಿ ನಟರಾಜನ್ ನಾಮಪತ್ರ ತಿರಸ್ಕಾರವು ಬಿಜೆಪಿಯ ಸೀಟ್ ಚೋರಿ : ಬಿ.ಕೆ.ಹರಿಪ್ರಸಾದ್ ಆರೋಪ



**ಬೆಂಗಳೂರು,ಜೂ.10-**ಇಷ್ಟು ದಿನಗಳ ಕಾಲ ಬಿಜೆಪಿಯು ಮತಗಳ್ಳತನ ಮಾಡುತ್ತಿತ್ತು. ಇದೀಗ ಸ್ಥಾನ ಕಳ್ಳತನ (ಸೀಟ್ ಚೋರಿ) ಮಾಡಲು ಮುಂದಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ.

ಕೆಪಿಸಿಸಿ ಅಧ್ಯಕ್ಷರಾದ ಬಳಿಕ ಇದೇ ಮೊದಲ ಬಾರಿಗೆ ಬಿ.ಕೆ.ಹರಿಪ್ರಸಾದ್ ಅವರು ಕಾಂಗ್ರೆಸ್ ಕಚೇರಿಗೆ ಆಗಮಿಸಿ ಕಾರ್ಯಕರ್ತರನ್ನು ಭೇಟಿ ಮಾಡಿದರು. ಬಳಿಕ ಪತ್ರಿಕಾಗೋಷ್ಠಿ ವೇಳೆ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಹರಿಪ್ರಸಾದ್, ಮಧ್ಯಪ್ರದೇಶ ಕಾಂಗ್ರೆಸ್‌ನಿಂದ ರಾಜ್ಯಸಭಾ ಆಭ್ಯರ್ಥಿಯಾಗಿದ್ದ ಮೀನಾಕ್ಷಿ ನಟರಾಜನ್ ಅವರ ನಾಮಪತ್ರ ತಿರಸ್ಕೃತಗೊಂಡಿದೆ.

ಇಷ್ಟು ದಿನಗಳ ಕಾಲ ಮತಗಳ್ಳತನ ಮಾಡುತಿದ್ದ ಬಿಜೆಪಿಯು ಇದೀಗ ಸೀಟ್ ಚೋರ್ ಮಾಡುವ ಮೂಲಕ ಕೀಳುಮಟ್ಟಕ್ಕೆ ಇಳಿದಿದೆ. ಹರಿಯಾಣ ಕಾಂಗ್ರೆಸ್ ಉಸ್ತುವಾರಿ ಆಯ್ಕೆ ಸಂದರ್ಭದಲ್ಲಿಯೂ ಬಿಜೆಪಿಯು ನಮಗೆ ದೊರೆಯಬೇಕಿದ್ದ ಸ್ಥಾನವನ್ನು ಬಿಜೆಪಿಯು ಕಸಿದುಕೊಂಡಿತ್ತು ಎಂದು ಆರೋಪಿಸಿದ್ದಾರೆ.

ಕೆಪಿಸಿಸಿ ಕಾರ್ಯಾಧ್ಯಕ್ಷ ಜೆ.ಸಿ.ಚಂದ್ರಶೇಖರ್ ಮಾತನಾಡಿ, ಹಿರಿಯ ಹಾಗೂ ರಾಜಕೀಯ ಮುತ್ಸದಿಯಾಗಿರುವ ಬಿ.ಕೆ.ಹರಿಪ್ರಸಾದ್ ಅವರನ್ನು ಕಾಂಗ್ರೆಸ್ ಪಕ್ಷದ ರಾಜ್ಯ ಅಧ್ಯಕ್ಷರಾಗಿ ಆಯ್ಕೆ ಮಾಡಿದೆ. ಇದೇ ತಿಂಗಳು 21ರಂದು ಅರಮನೆ ಮೈದಾನದಲ್ಲಿ ಪದಗ್ರಹಣ ಮಾಡಲಿದ್ದು, ಅಧಿಕೃತವಾಗಿ ಸಿಎಂ ಡಿ.ಕೆ.ಶಿವಕುಮಾರ್ ಅವರು ಪಕ್ಷದ ಬಾವುಟ ನೀಡಿ ಜವಾಬ್ದಾರಿಯನ್ನು ಹಸ್ತಾಂತರ ಮಾಡಲಿದ್ದಾರೆ. ಶಿವಕುಮಾರ್ ಹಾಗೂ ಹರಿಪ್ರಸಾದ್ ಅವರು ಅನುಭವಿ ಜೋಡಿಯಾಗಿದ್ದು, ಇವರ ಹಿಂದೆ ಸಿದ್ದರಾಮಯ್ಯ ಅವರ ಮಾರ್ಗದರ್ಶನ ಇರಲಿದೆ. 2028ರ ವಿಧಾನಸಭಾ ಚುನಾವಣೆಯನ್ನ ಮೂವರ ನೇತೃತ್ವದಲ್ಲಿ ಎದುರಿಸಿ ಮತ್ತೆ ಅಧಿಕಾರಕ್ಕೆ ಬರಲಿದ್ದೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜೂನ್ 18ರಂದು 24 ಸ್ಥಾನಗಳಿಗೆ ರಾಜ್ಯಸಭಾ ಚುನಾವಣೆ ನಡೆಯಲಿದೆ. 10 ರಾಜ್ಯಗಳಿಂದ ಹಲವು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ರಾಜ್ಯದಿಂದ ನಾಲ್ಕು ರಾಜ್ಯಸಭೆ ಸ್ಥಾನಗಳು ತೆರವಾಗಲಿವೆ. ಆ ಪೈಕಿ ಕಾಂಗ್ರೆಸ್ ಸಂಖ್ಯಾಬಲದಂತೆ 3 ಸ್ಥಾನ ಲಭಿಸಲಿದ್ದು, ಬಿಜೆಪಿಗೆ ಒಂದು ಸ್ಥಾನ ಸಿಗಲಿದೆ.

ಕರ್ನಾಟಕದಲ್ಲಿ ಕಾಂಗ್ರೆಸ್‌ನಿಂದ ರಾಜ್ಯಸಭೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮನ್ಸೂರ್ ಅಲಿ ಖಾನ್ ಹಾಗೂ ಪವನ್ ಖೇರಾ ಕಣಕ್ಕಿಳಿದಿದ್ದಾರೆ. ಹಾಗೆಯೇ, ಬಿಜೆಪಿಯಿಂದ ಪ್ರೊ ಎಂ.ನಾಗರಾಜ್ ಅವರಿಗೆ ರಾಜ್ಯಸಭೆ ಟಿಕೆಟ್ ನೀಡಲಾಗಿದೆ.

ಹಾಗೆಯೇ, ಮೀನಾಕ್ಷಿ ನಟರಾಜನ್ ಅವರನ್ನು ಮಧ್ಯಪ್ರದೇಶದ ರಾಜ್ಯಸಭಾ ಚುನಾವಣೆಗೆ ತನ್ನ ಅಭ್ಯರ್ಥಿಯಾಗಿ ಕಣಕ್ಕಿಳಿಸಿತ್ತು. ಆದರೆ, ಅವರ ನಾಮಪತ್ರ ತಿರಸ್ಕೃತಗೊಂಡಿದೆ. ಇದರಿಂದ ಬಿಜೆಪಿ ಅಭ್ಯರ್ಥಿಗೆ ಗೆಲುವು ಸುಲಭವಾಗಿದೆ.

ಮೀನಾಕ್ಷಿ ನಟರಾಜನ್ ತಮ್ಮ ನಾಮಪತ್ರದೊಂದಿಗೆ ಸಲ್ಲಿಸಿದ ಅಫಿಡವಿಟ್‌ನಲ್ಲಿ ಪ್ರಕರಣವೊಂದರ ವಿವರಗಳನ್ನು ಸಂಪೂರ್ಣವಾಗಿ ಬಹಿರಂಗಪಡಿಸಿಲ್ಲ ಎಂದು ಆರೋಪಿಸಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಕೊಠಾರಿ ಆಕ್ಷೇಪಣೆ ಸಲ್ಲಿಸಿದ್ದರು. ತೆಲಂಗಾಣದ ಹೈದರಾಬಾದ್‌ನ ನ್ಯಾಯಾಲಯದಲ್ಲಿ ಮೀನಾಕ್ಷಿ ವಿರುದ್ಧ ಪ್ರಕರಣ ಬಾಕಿ ಇದೆ. ತಮ್ಮ ನಾಮಪತ್ರ ದಾಖಲೆಗಳಲ್ಲಿ ಅದರ ವಿವರಗಳನ್ನು ನೀಡಿಲ್ಲ ಎಂದು ಆರೋಪಿಸಲಾಗಿತ್ತು.

ಈ ಆರೋಪಗಳನ್ನು ಕಾಂಗ್ರೆಸ್ ತಳ್ಳಿಹಾಕಿದ್ದು, ನಾಮನಿರ್ದೇಶನದ ಬಗ್ಗೆ ಗೊಂದಲ ಹರಡಲಾಗಿದೆ ಎಂದು ಹೇಳಿದೆ.

ಮೀನಾಕ್ಷಿ ನಟರಾಜನ್ ವಿರುದ್ಧ ಯಾವುದೇ ಕ್ರಿಮಿನಲ್ ಪ್ರಕರಣ ದಾಖಲಾಗಿಲ್ಲ. ಅವರಿಗೆ ಕೋರ್ಟ್‌ನಿಂದ ಕೇವಲ ನೋಟಿಸ್ ನೀಡಲಾಗಿದೆ. ಮೀನಾಕ್ಷಿ ಪರ ವಕೀಲರು ಈ ನೋಟಿಸ್‌ಗೆ ಪ್ರತಿಕ್ರಿಯಿಸಿದ್ದಾರೆ. ಯಾವುದೇ ಎಫ್‌ಐಆರ್ ದಾಖಲಿಸಲಾಗಿಲ್ಲ ಎಂದು ಕಾಂಗ್ರೆಸ್ ರಾಜ್ಯಸಭಾ ಸದಸ್ಯ ವಿವೇಕ್ ತಂಖಾ ಹೇಳಿದ್ದಾರೆ.


## ದಾವಣಗೆರೆ ಗ್ಯಾಂಗ್ ರೇಪ್ ಪ್ರಕರಣ : 9 ಆರೋಪಿಗಳಿಗೆ ನ್ಯಾಯಾಂಗ ಬಂಧನ, ಬಾಲಾಪರಾಧಿ ರಿಮ್ಯಾಂಡ್ ಹೋಮ್‌ಗೆ ಶಿಫ್ಟ್

**ದಾವಣಗೆರೆ,ಜೂ.10-**ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಒಂಟಿ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ 10 ಮಂದಿ ದುಷ್ಕರ್ಮಿಗಳಿಗೆ 14 ದಿನಗಳ ಕಾಲ ನ್ಯಾಯಾಂಗ ಬಂಧನ ವಿಧಿಸಿ ದಾವಣಗೆರೆ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಬುಧವಾರ ಆದೇಶಿಸಿದೆ.

ಈ ಆರೋಪಿಗಳ ಪೈಕಿ ಒಂಬತ್ತು ಮಂದಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಓರ್ವ ಬಾಲಾಪರಾಧಿಯನ್ನು ರಿಮ್ಯಾಂಡ್ ಹೋಮ್‌ಗೆ ಶಿಫ್ಟ್ ಮಾಡಲಾಗಿದೆ. ಪ್ರಕರಣ ಸಂಬಂಧ ಮಂಗಳವಾರ(ನಿನ್ನೆ) ಹತ್ತು ಜನ ಆರೋಪಿಗಳನ್ನು ಬಸವಾಪಟ್ಟಣ ಠಾಣೆ ಪೊಲೀಸರು ಬಂಧಿಸಿದ್ದರು.

ಇಂದು ಪೊಲೀಸರು ಆರೋಪಿಗಳನ್ನು ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಹಾಜರುಪಡಿಸಿದರು. ಬಳಿಕ ಕೋರ್ಟ್ ಆದೇಶದಂತೆ ಜಿಲ್ಲಾ ಕಾರಾಗೃಹಕ್ಕೆ ಕರೆದೊಯ್ಯಲಾಯಿತು.

ಪ್ರಕರಣದ ಹಿನ್ನೆಲೆ: ಜೂನ್ 3ರ ಸಂಜೆ 7 ಗಂಟೆಯ ಸುಮಾರಿಗೆ ಮಹಿಳೆ ಗಂಡನ ಮನೆಯಿಂದ ತನ್ನ ತವರು ಮನೆಗೆ ನಡೆದುಕೊಂಡು ಹೋಗುತ್ತಿದ್ದರು. ದಾರಿ ಮಧ್ಯೆ ಇಬ್ಬರು ಯುವಕರು ಆಕೆಗೆ ಸಹಾಯ ಮಾಡುವುದಾಗಿ ಹೇಳಿ ಮತ್ತು ಬರುವ ಔಷಧ ಬೆರೆಸಿದ್ದ ತಂಪು ಪಾನೀಯ ಕುಡಿಸಿದ್ದಾರೆ. ಬಳಿಕ ಅರೆ ಪ್ರಜ್ಞಾವಸ್ಥೆಯಲ್ಲಿದ್ದ ಮಹಿಳೆಯನ್ನು ಬೈಕ್‌ನಲ್ಲಿ ಊರ ಹೊರಗಿನ ಜಮೀನಿಗೆ



ಕರೆದೊಯ್ದಿದ್ದಾರೆ. ಅಲ್ಲಿ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಮಹಿಳೆ ಪೊಲೀಸರಿಗೆ ದೂರಿನಲ್ಲಿ ತಿಳಿಸಿದ್ದಾರೆ.

ಅಲ್ಲದೆ, ಆರೋಪಿಗಳು ಕೃತ್ಯದ ಫೋಟೋ, ವಿಡಿಯೋವನ್ನು ರೆಕಾರ್ಡ್ ಮಾಡಿಕೊಂಡು ವಿಕೃತಿ ಮೆರೆದಿದ್ದರು. ನೀಚ ಕೃತ್ಯದ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಬಳಿಕ ಪ್ರಕರಣ ಬೆಳಕಿಗೆ ಬಂದಿತ್ತು. ಆಗ ಸಂತ್ರಸ್ತೆ ಪೊಲೀಸ್ ಠಾಣೆಗೆ ಬಂದು ದೂರು ನೀಡಿದ್ದರು. ಗ್ರಾಮದ ಹೊರವಲಯದ ತೋಟದಲ್ಲಿ ಆರೋಪಿಗಳು ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಕುರಿತು ಪ್ರಕರಣ ದಾಖಲಾಗಿದೆ ಎಂದು ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ಹೆಚ್.ಟಿ. ಮಾಹಿತಿ ನೀಡಿದ್ದಾರೆ.

## ಚಿಕ್ಕಮಗಳೂರು: ರಿವಾಲ್ವರ್‌ನಿಂದ ಗುಂಡು ಹಾರಿಸಿಕೊಂಡು ಸಾವಿಗೆ ಶರಣಾದ ಗೃಹಿಣಿ




**ಚಿಕ್ಕಮಗಳೂರು,ಜೂ.10-**ಗೃಹಿಣಿಯೊಬ್ಬರು ಗುಂಡು ಹಾರಿಸಿಕೊಂಡು ಸಾವಿಗೆ ಶರಣಾಗಿ ರುವ ಘಟನೆ ನಗರದ ಹಾಲೇನಹಳ್ಳಿ ಪ್ರದೇಶದಲ್ಲಿ ಬುಧವಾರ ನಡೆದಿದೆ. ಮೃತ ರನ್ನು ಸುಮಾ (55) ಎಂದು ಗುರುತಿಸಲಾಗಿದೆ.

ಲೈಸೆನ್ಸ್ ಹೊಂದಿದ್ದ ರಿವಾಲ್ವರ್‌ನಿಂದ ಗುಂಡು ಹಾರಿಸಿಕೊಂಡ ಸ್ಥಿತಿಯಲ್ಲಿ ಸುಮಾ ಅವರ ಮೃತದೇಹ ಪತ್ತೆಯಾಗಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಬಸವನಹಳ್ಳಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಮೃತರು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ಪೊಲೀಸರು ಡೆತ್ ನೋಟ್ ವಶಕ್ಕೆ ಪಡೆದು ಪರಿಶೀಲನೆ ನಡೆಸುತ್ತಿದ್ದಾರೆ.

ಡೆತ್ ನೋಟ್‌ನಲ್ಲಿರುವ ಮಾಹಿತಿಯ ಆಧಾರದ ಮೇಲೆ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರೆಸಿದ್ದಾರೆ.

ಸುಮಾ ಅವರ ಪತಿ ರಾಜೇಶ್ ಉದ್ಯಮಿಯಾಗಿದ್ದು, ಘಟನೆ ನಡೆದ ವೇಳೆ ಮನೆಯಲ್ಲಿ ಇರಲಿಲ್ಲ ಎಂದು ತಿಳಿದುಬಂದಿದೆ. ಮನೆಯಲ್ಲಿ ಒಬ್ಬರೇ ಇದ್ದ ಸಂದರ್ಭದಲ್ಲಿ ಘಟನೆ ಸಂಭವಿಸಿರುವ ಸಾಧ್ಯತೆಯಿದೆ ಎಂದು ಪೊಲೀಸರು ಶಂಕಿಸಿದ್ದಾರೆ.

ರಿವಾಲ್ವರ್ ಹಾಗೂ ಇತರೆ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿರುವ ತನಿಖಾಧಿಕಾರಿಗಳು,

ಮೃತರ ಕುಟುಂಬಸ್ಥರು ಹಾಗೂ ಪರಿಚಿತರನ್ನು ವಿಚಾರಣೆ ನಡೆಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆ ವರದಿ ಬಂದ ಸತ್ಯಾಂಶ ಹೊರಬೀಳುವ ನಿರೀಕ್ಷೆಯಿದೆ. ಗೃಹಿಣಿಯ ಸಾವಿನ ಹಿಂದೆ ಯಾವುದೇ ಇತರ ಕಾರಣಗಳಿವೆಯೇ ಅಥವಾ ಇದು ಆತ್ಮಹತ್ಯೆಯೇ ಎಂಬ ಬಗ್ಗೆ ಪೊಲೀಸರು ಸಮಗ್ರ ತನಿಖೆ ಕೈಗೊಂಡಿದ್ದಾರೆ. ಬಸವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರಿಯಾಂಕ್ ಖರ್ಗೆ ಪ್ರಚಾರಕ್ಕಾಗಿ ಆರ್‌ಎಸ್‌ಎಸ್ ಬಗ್ಗೆ ಮಾತನಾಡುತ್ತಿದ್ದಾರೆ-ಸಂಸದ ಯದುವೀರ್ ಒಡೆಯರ್

**ಮೈಸೂರು,ಜೂ.10-**ದೇಶದ ಸಂಸ್ಕೃತಿ ರಕ್ಷಿಸುವ ಕೆಲಸವನ್ನು ಆರ್‌ಎಸ್‌ಎಸ್ ಮಾಡುತ್ತಿದೆ. ಇದನ್ನು ದೇಶದ ಜನರೇ ಮೆಚ್ಚಿಕೊಂಡಿದ್ದಾರೆ. ಈ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಕೇವಲ ಪ್ರಚಾರಕ್ಕಾಗಿ ಮಾತನಾಡುತ್ತಿದ್ದಾರೆ ಎಂದು ಬಿಜೆಪಿ ಸಂಸದ ಯದುವೀರ್ ಒಡೆಯರ್ ಟೀಕಿಸಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿಂದು ಮಾತನಾಡಿದ ಅವರು, ನರೇಂದ್ರ ಮೋದಿಯವರು ಪ್ರಧಾನಿಯಾಗಿ 12 ವರ್ಷ ಸುದೀರ್ಘ ಸೇವೆ ಮಾಡಿದ್ದಾರೆ. ಈಗಲೂ ದೇಶದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ವಿಕಸಿತ ಭಾರತ ನಿರ್ಮಾಣ ಮಾಡಲು ಮೋದಿ ಅಡಿಗಲ್ಲು ಹಾಕಿದರು. ಮೋದಿ ಪ್ರಧಾನಿಯಾಗುವ ಮೊದಲು ದೇಶದ ಆರ್ಥಿಕ ಪರಿಸ್ಥಿತಿ ಸರಿ ಇರಲಿಲ್ಲ. ಇದೀಗ ಆರ್ಥಿಕತೆಯಲ್ಲಿ ದೇಶ ಮುಂದಿದೆ. ವಿದೇಶಿ ಕಂಪನಿಗಳು ಭಾರತಕ್ಕೆ ಬರುತ್ತಿವೆ ಎಂದರು.

25 ಕೋಟಿ ಜನರು ಬಡತನ ರೇಖೆಯಿಂದ ಹೊರಬಂದಿದ್ದಾರೆ. ದೇಶಾದ್ಯಂತ ಬಡವರ ಸಂಖ್ಯೆ



ಶೇ.29 ದಿಂದ ಶೇ.11ಕ್ಕೆ ಇಳಿಕೆಯಾಗಿದೆ. ಇದು ಮೋದಿ ಸರ್ಕಾರದ ಸಾಧನೆ. ಕಿಸಾನ್ ಸಮ್ಮಾನ್ ಯೋಜನೆಯ ಮೂಲಕ ಪ್ರತಿ ರೈತರ ಖಾತೆಗೆ ನೇರವಾಗಿ 6 ಸಾವಿರ ರೂ ಹಣ ಹೋಗುತ್ತಿದೆ. 4.5 ಲಕ್ಷ ಕೋಟಿ ಇದಕ್ಕೆ ವಿನಿಯೋಗ ಆಗುತ್ತಿದೆ. ಮಹಿಳೆಯರ ಸ್ವಸಹಾಯ ಗುಂಪುಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ. ಯುವಕರಿಗೆ ಸ್ಕಿಲ್ ತರಬೇತಿ ಕೊಡಲಾಗುತ್ತಿದೆ. ದೇಶೀಯ ಗುಣಮಟ್ಟದ ಉತ್ಪನ್ನಗಳಿಗೆ ವಿದೇಶಗಳಿಂದ ಬೇಡಿಕೆ ಹೆಚ್ಚಿದೆ. ವಿಶ್ವಮಟ್ಟದಲ್ಲಿ ಭಾರತಕ್ಕೆ ದೊಡ್ಡ ಮಟ್ಟದ ಗೌರವ ಸಿಗುತ್ತಿದೆ. ಇದೆಲ್ಲವೂ ಕೂಡ ನರೇಂದ್ರ ಮೋದಿ ಸರ್ಕಾರದ ಸಾಧನೆಗಳು ಎಂದು ಹೇಳಿದರು.

ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ: ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡುವ ಮೂಲಕ ದೇಶದ ಜನರ ಕನಸನ್ನು ಮೋದಿ ನನಸು ಮಾಡಿದರು. ಈ ಮೂಲಕ 500 ವರ್ಷಗಳ ವಿವಾದವನ್ನು ಬಗೆಹರಿಸಿದರು.

## ಬೆಳಗಾವಿ: ಸಾವಿರ ಕಂಠಗಳಿಂದ ಮೊಳಗಿದ ವಚನೋತ್ಸವ

**ಬೆಳಗಾವಿ,ಜೂ.10-**ಇಲ್ಲಿನ ಕೆಎಲ್‌ಇ ಡೀಮ್ಡ್ ವಿಶ್ವವಿದ್ಯಾಲಯದ ಆವರಣದಲ್ಲಿ 1 ಗಂಟೆ 15 ನಿಮಿಷಗಳ ಕಾಲ ಬಸವಣ್ಣನವರ 34 ವಚನಗಳು ಸಾವಿರ ಕಂಠಗಳಿಂದ ಮೊಳಗಿದವು. ರಾಗಬದ್ಧವಾಗಿ ಹಾಡಿದ ವಚನಗಳಿಗೆ ಗಣ್ಯರು ತಲೆದೂಗಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕೆಎಲ್‌ಇ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಅಕಾಡೆಮಿ, ಸಂಸ್ಥೆಯ ಕನ್ನಡ ಬಳಗ ಮತ್ತು ಸಂಗೀತ ಮಹಾವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಿದ್ದ ವಚನೋತ್ಸವ ಎಲ್ಲರ ಮನಸೂರೆಗೊಳಿಸಿತು.

5 ವರ್ಷದ ಮಕ್ಕಳಿಂದ ಹಿಡಿದು 80 ವರ್ಷಟ ವೃದ್ಧರವರೆಗೆ ಕೆಎಲ್‌ಇ ಸಂಸ್ಥೆಯ ಮೆಡಿಕಲ್, ಡೆಂಟಲ್, ಹೋಮಿಯೋಪಥಿ, ಫಾರ್ಮಸಿ, ಫಿಸಿಯೋಥೆರಪಿ, ನರ್ಸಿಂಗ್, ಅಲೈಡ್ ಹೆಲ್ತ್ ಸೈನ್ಸ್, ಪ್ರಾಥಮಿಕ, ಪ್ರೌಢ, ಪಿಯು ಮತ್ತು ಪದವಿ ವಿದ್ಯಾರ್ಥಿಗಳು, ವೈದ್ಯರು, ಅಧ್ಯಾಪಕರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಜನರು ಒಟ್ಟಾಗಿ ವಚನಗಳನ್ನು ಏಕ ಕಂಠದಲ್ಲಿ ಸುಶ್ರಾವ್ಯವಾಗಿ ಹಾಡಿದರು.

ಡೀಮ್ಡ್ ವಿ.ವಿಯ ಆವರಣದ ಮೆಟ್ಟಿಲುಗಳ ಮೇಲೆ ಶುಭ್ರ ಬಿಳಿ ಬಟ್ಟೆ ಧರಿಸಿ, ಕೊರಳಲ್ಲಿ ಬಸವಣ್ಣನ




ಭಾವಚಿತ್ರವಿದ್ದ ವಚನೋತ್ಸವ ಶಲ್ಯ ಧರಿಸಿ ನಿಂತಿದ್ದ ಗಾಯಕರು ಶಿಸ್ತು, ರಾಗಬದ್ಧವಾಗಿ 34 ವಚನಗಳನ್ನು ಹಾಡಿದರು.ಈ ಮೊದಲು ಶಿವಮೊಗ್ಗದಲ್ಲಿ ಆಯೋಜಿಸಿದ್ದ ವಚನ ಗಾಯನ ಮಾದರಿಯಲ್ಲಿ ಇದೇ ಮೊದಲ ಬಾರಿ ಬೆಳಗಾವಿಯಲ್ಲಿ ವಚನೋತ್ಸವ ಹಮ್ಮಿಕೊಳ್ಳಲಾಗಿತ್ತು. ಖ್ಯಾತ ಗಾಯಕ ದಿವಂಗತ ಸಿ.ಅಶ್ವಥ್ ಅವರು ರಾಗ ಸಂಯೋಜಿಸಿ ಹಾಡಿದ ಮಾದರಿಯನ್ನು ಅನುಸರಿಸಿ ವಚನಗಳನ್ನು ಪ್ರಸ್ತುತಪಡಿಸಲಾಯಿತು. ಇಲ್ಲಿನ ಸಂಗೀತ ಮಹಾವಿದ್ಯಾಲಯದ ಶಿಕ್ಷಕರು ಕಳೆದ ಮೂರು ತಿಂಗಳು ನಿರಂತರ ಶ್ರಮವಹಿಸಿ ಸಮೂಹ ಗಾಯನ ಸಿದ್ಧಪಡಿಸಿ ಆಯೋಜಿಸಿದ್ದಕ್ಕೆ ಎಲ್ಲರೂ ಶ್ಲಾಘನೆ ವ್ಯಕ್ತಪಡಿಸಿದರು. ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಡೀಮ್ಡ್ ವಿ.ವಿ. ಕುಲಾಧಿಪತಿ ಡಾ.ಪ್ರಭಾಕರ ಕೋರೆ ವಚನಗಾಯನದ ಮಾಧುರ್ಯಕ್ಕೆ ಮನಸೋತರು. ಪ್ರತಿ ವರ್ಷ ದೊಡ್ಡ ಮಟ್ಟದಲ್ಲಿ ವಚನೋತ್ಸವ ಆಯೋಜಿಸುವ ಭರವಸೆ ನೀಡಿದರು.

# ...ಮೊದಲನೇ ಪುಟದಿಂದ

## ಮೂರು ವರ್ಷದ ಕಾಂಗ್ರೆಸ್ ಆಡಳಿತದಲ್ಲಿ ಜಿಲ್ಲೆಯ ಅಭಿವೃದ್ಧಿ-ಬೋಸರಾಜ

ಶೀಘ್ರದಲ್ಲಿ ಅಂತಿಮ ರೂಪ ನೀಡಲಾಗುತ್ತಿದೆ. ಬಹುದಿನಗಳಿಂದ ಕಾರ್ಯನಿರ್ವಹಿಸದೇ ಇದ್ದ ಓಪೆಕ್ ಆಸ್ಪತ್ರೆಯನ್ನು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಇವರು ಪ್ರಯತ್ನ ಫಲವಾಗಿ ಪೂರ್ಣ ಪ್ರಮಾಣದಲ್ಲಿ ಪ್ರಾರಂಭಿಸಲಾಗಿದೆ. ಟ್ರಾಮ್ ಕೇರ್, ಕ್ಯಾನ್ಸರ್ ಆಸ್ಪತ್ರೆಗಳನ್ನು ಮಂಜೂರು ಮಾಡಿಸಲಾಗಿದೆ.

ಕೆಕೆಆರ್‌ಡಿಬಿ ಅನುದಾನದಲ್ಲಿ ಪ್ರತಿವಿಧಾನಸಭಾ ಕ್ಷೇತ್ರಕ್ಕೆ 5 ಮತ್ತು ಸಿಎಸ್‌ಆರ್ ಅನುದಾನದಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಮೂರು ಸೇರಿ 8ಶಾಲೆಗಳನ್ನು ನಿರ್ಮಿಸಲಾಗುತ್ತದೆ.40 ಕೋಟಿ ರೂ ವೆಚ್ಚದಲ್ಲಿ 2 ಸಾವಿರ ಜನ ಆಸನ ವ್ಯವಸ್ಥೆ ಸಭಾಂಗಣ ಕೃಷಿ ವಿಶ್ವವಿದ್ಯಾಲಯದಲ್ಲಿ ಪ್ರಾರಂಭವಾಗಿದೆ. ನಗರದ ಮಧ್ಯಭಾಗದಲ್ಲಿರುವ ಜೈಲು ಸ್ಥಳಾಂತರಕ್ಕೆ ಒಂದು ಕೋಟಿ ರೂ ಭರವಸೆ ನೀಡಲಾಗಿದೆ. ಕರ್ನಾಟಕ ಸಂಘವನ್ನು 2 ಕೋಟಿ ರೂ ವೆಚ್ಚದಲ್ಲಿಅಭಿವೃದ್ಧಿ ಪಡಿಸಲಾಗುತ್ತಿದೆ. 9 ಕೋಟಿ ರೂ ವೆಚ್ಚದ ವಧಾ ಕೇಂದ್ರವನ್ನು ಸ್ಥಳಾಂತರಿಸಿ ನಿರ್ಮಿಸಲು ಅನುದಾನ ನೀಡಲಾಗಿದೆ. ಕಾರ್ಮಿಕರ ಮಕ್ಕಳಿಗೆ ವಸತಿ ಸಹಿತ ಶಾಲೆ ನಿರ್ಮಾಣ ಮಾಡಲು 37 ಕೋಟಿ ರೂ ಅನುದಾನ ನೀಡಲಾಗಿದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು ಕಾಮಗಾರಿ ಪ್ರಾರಂಭವಾಗಲಿದೆ. ನಗರದ ಮುಸ್ಲಿಂ ಬಾಂಧವರಿಗೆ ಪ್ರಾರ್ಥನೆಗ ಅನುಕೂಲವಾಗುವಂತೆ ಪ್ರತ್ಯೇಕ ಪ್ರಾರ್ಥನಸ್ಥಳ ಹಾಗೂ ಒಂದು ಕೋಟಿ ರೂ ವೆಚ್ಚದಲ್ಲಿ ಶಾದಿಮಹಲ್ ನಿರ್ಮಿಸಲಾಗುತ್ತದೆ. ಎಸ್‌ಇಪಿ ಮತ್ತು ಟಿಎಸ್‌ಪಿ ಅನುದಾನದಲ್ಲಿ 13 ಸಾವಿರ ಕೊಳವೆಭಾವಿಗಳನ್ನು ಕೊರೆಯಿಸಲು ಎರಡು ತಾಂತ್ರಿಕ ಅಧಿಕಾರಿಗಳ ತಂಡ ರಚಿಸಲಾಗಿದೆ. ಅಂತರ್ಜಲ ಹೆಚ್ಚಿಸಲು ಚೆಕ್ ಡ್ಯಾಂ, ಬ್ಯಾರೇಜ್ ನಿರ್ಮಾಣಕ್ಕೆ 1250 ಕೋಟಿ ರೂ ಅನುದಾನ ನೀಡಿ ಕಾಮಗಾರಿ ಪ್ರಾರಂಭಿಸಲಾಗಿದೆ. ರಾಜ್ಯದಲ್ಲಿ ಅಂತರಜಲ ಹೆಚ್ಚಿಸಲು 37 ಲಕ್ಷ ಕೊಳವೆಭಾವಿ ಅಂತರಜಲ ಪರೀಕ್ಷೆ ನಡೆಸಲಾಗುತ್ತಿದೆ ಎಂದರು.

ಚಿಕಲಪರ್ವಿ ಸೇರಿದಂತೆ ಬ್ಯಾರೇಜ್‌ಗಳ ನಿರ್ಮಾಣಕ್ಕೆ ಆಂದ್ರ ಮತ್ತು ತೆಲಂಗಾಣದ ಸರ್ಕಾರಗಳೊಂದಿಗೆ ಮಾತುಕತೆ ನಡೆಸಲಾಗಿದೆ. ಸಕರಾತ್ಮಕ ಸ್ಪಂದನೆ ದೊರಕಿದ್ದು ಆಯಾ ರಾಜ್ಯಗಳ ಸಹಮತಿ ದೊರಕಿದ ನಂತರ ಕಾಮಗಾರಿ ಪ್ರಾರಂಭಿಸಲಾಗುತ್ತದೆ. ಆಲಮಟ್ಟಿ ಜಲಾಶಯದ ಎತ್ತರಕ್ಕೆ ಸರ್ಕಾರ ಬದ್ದವಾಗಿದ್ದು ಕೇಂದ್ರ ಸರ್ಕಾರ ಸಹಕಾರ ನೀಡುತ್ತಿಲ್ಲ. ಕೇಂದ್ರ ಅನುಮತಿ ನೀಡಲು ಸರ್ಕಾರ ಮೇಲೆ ಒತ್ತಡ ಹಾಕಲಾಗಿದೆ. ತುಂಗಭದ್ರ ಜಲಾಶಯದ ಕ್ರಸ್ಟಗೇಟ್ ಕಿತ್ತಿಹೋಗಿದ್ದರಿಂದ ಎದುರಾಗಿದ್ದ ಆತಂಕವನ್ನು ಸರ್ಕಾರ ದೂರ ಮಾಡಿದೆ. ಎಲ್ಲಾ ಗೇಟ್‌ಗಳನ್ನು ಬದಲಾಯಿಸುವಕಾಮಗಾರಿ ಪೂರ್ಣಗೊಳಿಸಲಾಗಿದ್ದು ತುಂಗಭದ್ರ ಅಚ್ಚುಕಟ್ಟು ವ್ಯಾಪ್ತಿಯ ಸಮಸ್ಯೆ ನೀಗಿದಂತಾಗಿದೆ. ಮೂರು ವರ್ಷಗಳ ಅವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ನಡೆದಿವೆ ಎಂದರು.ಡಿ.ಕೆ.ಶಿವುಕುಮಾರ ನೇತೃತ್ವದ ಸರ್ಕಾರದಲ್ಲಿ ಸಚಿವ ಸ್ಥಾನ ನೀಡುವದು, ಬಿಡುವದು ಪಕ್ಷದ ವರಿಷ್ಟರಿಗೆ ಬಿಟ್ಟಿದ್ದು ಎಂದು ಮಾಜಿ ಸಚಿವ ಎನ್.ಎಸ್.ಬೋಸರಾಜ ಹೇಳಿದರು. ಸಂಸದರೊಂದಿಗೆ ದೆಹಲಿಗೆ ತೆರಳಿ ವಿಧಾನ ಪರಿಷತ್ ಸ್ಥಾನನೀಡುವಂತೆ ಮನವಿಮಾಡಲಾಗಿದೆ. ಸಚಿವಸ್ಥಾನ ಕುರಿತು ಚರ್ಚಿಸಿಲ್ಲ. ಎರಡನೇ ಸುತ್ತಿನಲ್ಲಿ ಸಚಿವ ಸ್ಥಾನ ಹಂಚಿಕೆ ಮಾಡಲಾಗುತ್ತಿದುದ ಸಾಕಷ್ಟು ಜನರು ಆಕಾಂಕ್ಷಿಗಳಾಗಿದ್ದಾರೆ. ಡಾ.ಶರಣಪ್ರಕಾಶ ಪಾಟೀಲ್ ಸೇರಿದಂತೆ ಕಳೆದ ಬಾರಿ ಬೇರೆ ಬೇರೆ ಜಿಲ್ಲೆಗಳಿಗೆ ಉಸ್ತುವಾರಿ ನೀಡಲಾಗಿದೆ. ಬೇರೆಯವರು ಉಸ್ತುವಾರಿಯಿಂದ ಜಿಲ್ಲೆಯ ಅಭಿವೃದ್ಧಿಗೆ ಹಿನ್ನಡೆಯಾಗಿಲ್ಲ. ಜಿಲ್ಲೆಯವರೇ ಸಚಿವರಾಗಬೇಕೆನ್ನವು ಬೇಡಿಕೆಯಿದೆ. ಪಕ್ಷ ವರಿಷ್ಟರು ಸಕಾಲದಲ್ಲಿ ನಿರ್ಧಾರ ಕೈಗೊಳ್ಳುತ್ತಾರೆ. ಸಚಿವ ಸ್ಥಾನ ಹಂಚಿಕೆ ಕೇವಲ ಸೇವಾ ಹಿರಿತನ ಆಧಾರದ ಮೇಲೆ ಹಂಚಿಕೆಯಾಗುವದಿಲ್ಲ. ಅಭಿವೃದ್ಧಿ, ಎಲ್ಲಾ ಸಮೂದಾಯಗಳಿಗೆ ನ್ಯಾಯ ಒದಗಿಸುವಸೇರಿ ಇತರೆ ಅಂಶಗಳನ್ನು ಪರಿಗಣಿಸಲಾಗುತ್ತದೆ ಎಂದರು. ಮೂರು ವರ್ಷಗಳ ಸಚಿವ ಸ್ಥಾನದಿಂದ ತೃಪ್ತಿಯಿದೆ ಎಂದರು.ಈ ಸಂದರ್ಬದಲ್ಲಿ ಸಂಸದ ಜಿ.ಕುಮಾರನಾಯಕ, ಮಹ್ಮದ ಶಾಲಂ, ಜಯಣ್ಣ, ಕೆ.ಶಾಂತಪ್ಪ, ಜಯವಂತರಾವ್‌ಪತಂಗೆ, ನರಸಿಂಹಲು ಮಾಡಗಿರಿ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ಸಾಜೀದ ಸಮೀರ್, ಆಂಜಿನೇಯ್ಯ ಕುರುಬದೊಡ್ಡಿ, ವಿ.ಲಕ್ಷ್ಮೀರೆಡ್ಡಿ, ನರಸರೆಡ್ಡಿ,ಯು.ಗೋವಿಂದರೆಡ್ಡಿ, ವಿಶ್ವನಾಥ ಪಟ್ಟಿ ಸೇರಿದಂತೆ ಅನೇಕರಿದ್ದರು.

## ಕಂಠಪೂರ್ತಿ ಮದ್ಯಪಾನ ಮಾಡಿ ಕಾರು ಚಾಲನೆ: ಡಿವೈಡರ್‌ಗೆ ಡಿಕ್ಕಿ, ಚಾಲಕ ಪಾರು

ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಸಂಚಾರ ಪೊಲೀಸರು ಪರಿಶೀಲನೆ ನಡೆಸಿದರು. ವಿಚಾರಣೆ ವೇಳೆ ಚಾಲಕ ಕಣ್ಣು ಮಂಜಾಗಿ ಡಿವೈಡರ್ ಮೇಲೆ ಕಾರು ಹತ್ತಿಸಿದೆ ಸಾರ್ ಎಂದು ಹೇಳಿದ್ದಾನೆ ಎನ್ನಲಾಗಿದೆ. ಪರಿಶೀಲನೆಯಲ್ಲಿ ಚಾಲಕ ಮದ್ಯಪಾನ ಮಾಡಿ ವಾಹನ ಚಲಾಯಿಸಿದ್ದರಿಂದಲೇ ಅಪಘಾತ ಸಂಭವಿಸಿರುವುದು ಬೆಳಕಿಗೆ ಬಂದಿದೆ. ಅದೃಷ್ಟವಶಾತ್ ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದು, ಯಾವುದೇ ಇತರೆ ಜೀವಹಾನಿ ಅಥವಾ ಗಾಯಗಳಾಗಿಲ್ಲ. ಈ ಸಂಬಂಧ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಾನ್ವಿಯಲ್ಲಿ ಡೊಮೆಸ್ಟಿಕ್ ಸಿಲಿಂಡರ್ ದುರ್ಬಳಕೆ ವಿರುದ್ಧ ತಹಸೀಲ್ದಾರ ದಾಳಿ: 15 ಸಿಲಿಂಡರ್ ವಶ

ಕೇವಲ ಮನೆ ಬಳಕೆಗೆ ಮಾತ್ರ ನೀಡಲಾಗಿದ್ದು, ಹೋಟೆಲ್, ಡಾಬಾ, ಬೇಕರಿ, ಕ್ಯಾಂಟೀನ್ ಸೇರಿದಂತೆ ಯಾವುದೇ ವಾಣಿಜ್ಯ ಚಟುವಟಿಕೆಗೆ ಬಳಸುವುದು ಕಾನೂನುಬಾಹಿರ ಎಂದು ಎಚ್ಚರಿಸಿದರು. ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದರೆ ಕಠಿಣ ಕ್ರಮ ಜರುಗಿಸಲಾಗುವುದು ಎಂದರು. ಶ್ರೀನಿಧಿ ಗ್ಯಾಸ್ ಏಜೆನ್ಸಿ ಮಾಲೀಕರಿಗೆ ಖಡಕ್ ಎಚ್ಚರಿಕೆ ನೀಡಿದ ಅವರು, ಹೋಟೆಲ್ ಹಾಗೂ ಡಾಬಾಗಳಿಗೆ ಡೊಮೆಸ್ಟಿಕ್ ಸಿಲಿಂಡರ್ ಸರಬರಾಜು ಮಾಡಿರುವುದು ಪತ್ತೆಯಾದರೆ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು. ಈ ದಾಳಿಯಲ್ಲಿ ಕಂದಾಯ ಇಲಾಖೆ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

## ರೈತರಿಗರ ರಸಗೊಬ್ಬರ, ವಸತಿ ನಿವೇಶನ ಹಕ್ಕು ನೀಡಲು ಆಗ್ರಹಿಸಿ 16ರಂದು ಪ್ರತಿಭಟನೆ-ಬಸವಂತ್ರಾಯಗೌಡ

ಗ್ರಾಮೀಣ ಭಾಗದ ಬಂಡಿ ರಸ್ತೆ ಮತ್ತು ಸ್ಮಶಾನ ರಸ್ತೆ ಒತ್ತುವರಿ ಮಾಡಿಕೊಂಡಿದ್ದು, ಈ ಬಗ್ಗೆ ಸಾಕಷ್ಟು ಮನವಿ ಮಾಡಲಾಗಿದೆ ತಾಲೂಕಾಡಳಿತ, ಜಿಲ್ಲಾಡಳಿತ ಕ್ರಮ ವಹಿಸದೇ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದೆ, ಸಿಂಧನೂರು ತಾಲೂಕಿನ ಕೆಂಗಲ್, ಸಿರವಾರ ತಾಲೂಕಿನ ಕಲ್ಲೂರ ಗ್ರಾಮದಲ್ಲಿ ಸ್ಮಶಾನ ರಸ್ತೆ ಒತ್ತುವರಿಯಾಗಿದ್ದು ತೆರವುಗೊಳಿಸಬೇಕು ಎಂದರು.ಜಿಲ್ಲಾ ಕಾರ್ಯದರ್ಶಿ ನರಸಣ್ಣ ನಾಯಕ ಮಾತನಾಡಿ, ಜಿಲ್ಲೆಯಲ್ಲಿ ರಸ ಗೊಬ್ಬರ ಅಭಾವ ಸೃಷ್ಠಿ ಮಾಡಿ, ಹೆಚ್ಚಿನ ಧರಕ್ಕೆ ಮಾರಾಟಕ್ಕೆ ಅಂಗಡಿಗಳ ಮಾಲೀಕರು ಮುಂದಾಗಿದ್ದಾರೆ, ಎಫ್‌ಐಡಿ ಮೂಲಕ ರಸಗೊ ಬ್ಬರ ಪೂರೈಸುತ್ತಿದ್ದು, ಯೂರಿಯಾ ರಸಗೊಬ್ಬರ ತಿಂಗಳಿಗೆ ಒಂದು ಚೀಲ ನೀಡುತ್ತಿದ್ದಾರೆ. ಇವರಿಂದ ರೈತರಿಗೆ ಸಮಸ್ಯೆಯಾಗುತ್ತಿದೆ ಎಂದು ತಿಳಿಸಿದರು.ದೇವದುರ್ಗ ತಾಲೂಕಿನಲ್ಲಿ ಕಳಪೆ ಬೀಜ ಮತ್ತು ರಸಗೊಬ್ಬರ ಮಾರಾಟ ಮಾಡುತ್ತಿದ್ದು ಮಾಹಿತಿ ನೀಡಿದೆ, ಈವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ, ಜಿಲ್ಲೆಯ ಆಂಧ್ರ ಮತ್ತು ತೆಲಂಗಾಣ ಗಡಿ ಭಾಗದಲ್ಲಿ ಹತ್ತಿ ಕಳಪೆ ಬೀಜ ಮತ್ತು ರಸ ಗೊಬ್ಬರ ತಂದು ಮಾರಾಟ ಮಾಡುತ್ತಿದ್ದಾರೆ, ಪ್ರತಿ ವರ್ಷವೂ ಇದು ಮುಂದುವರೆಯುತ್ತಾ ಬಂದರೂ ದೂರು ದಾಖಲಿಸಿ ಕ್ರಮ ವಹಿಸುತ್ತಿಲ್ಲವೆಂದು ದೂರಿದರು.

ಸರ್ಕಾರ ಜೋಳ ಖರೀದಿ ಮಾಡಿದ್ದು ಮಾರಾಟ ಮಾಡಿದ ರೈತರ ಖಾತೆಗೆ ಹಣ ಜಮಾ ಮಾಡಿಲ್ಲ ಇದೀಗ ಮುಂಗಾರು ಬಿತ್ತನೆಗೆ ಬೀಜ, ರಸಗೊಬ್ಬರ ಕೀಟನಾಶಕಗಳಿಗೆ ಹಣ ವ್ಯಹಿಸಲು ತೊಂದರೆಯಾಗಿದೆ ರೈತರು ಸಾಲ ಮಾಡಿ ಬೆಳೆ ಬೆಳೆಯ ಬೇಕಾದ ಪರಸ್ಥಿತಿ ಉಂಟಾಗಿದೆ ಎಂದರು.ವಿದ್ಯುತ್‌ನ್ನು ಸರ್ಕಾರದ ಖಾಸಗಿಗೆ ವಹಿಸಲು ಮುಂದಾಗಿದ್ದು ಇದರಿಂದ ಭಾಗ್ಯ ಜೋತಿ, ಕುಟೀರ ಜ್ಯೋತಿ ಯೋಜನೆ ಫಲಾನುಭವಿಗಳು ತೊಂದರೆಗೆ ಸಿಲುಕುತ್ತಾರೆ, ಬೇಕಾಬಿಟ್ಟಿ ವಿದ್ಯುತ್ ಪೂರೈಕೆ ಹಿನ್ನೆಲೆಯಲ್ಲಿ ರೈತರೂ ಸಂಕಷ್ಟ ಅನುಭವಿಸಬೇಕಾಗುತ್ತದೆ, ಈಗಿರುವುದನ್ನೆ ಮುಂದುವರೆಸಿಕೊಂಡು ಹೋಗಲು ಒತ್ತಾಯಿಸಲಾಗುತ್ತದೆ ಎಂದರು. ಉಪಾಧ್ಯಕ್ಷ ವೀರನಗೌಡ ಮಾತನಾಡಿ, ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಿವೇಶನ ರಹಿತ ಬಡ ಕುಟುಂಬಗಳ ಸಂಖ್ಯೆ ದಿನೇದಿನೇ ಹೆಚ್ಚುತ್ತಿದ್ದು, ಅನೇಕ ಕುಟುಂಬಗಳು ಒಂದೇ ಮನೆಯಲ್ಲಿ ಸಂಕಷ್ಟದ ಜೀವನ ನಡೆಸುತ್ತಿವೆ. ಇನ್ನೂ ಹಲವಾರು ಕುಟುಂಬಗಳು ಸರ್ಕಾರಿ ಜಾಗಗಳು ಹಾಗೂ ಆಶ್ರಯ ಕಾಲೋನಿಗಳಲ್ಲಿ ಹಲವು ವರ್ಷಗಳಿಂದ ತಾತ್ಕಾಲಿಕ ಶೆಡ್‌ಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿದ್ದರೂ ಇದುವರೆಗೆ ಹಕ್ಕುಪತ್ರಗಳನ್ನು ಪಡೆದಿಲ್ಲ. ಇಂತಹ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ನೀಡುವುದರ ಜೊತೆಗೆ ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದರು. ಈ ಸಂದರ್ಭದಲ್ಲಿ ಹನುಮಂತ, ದುರುಗೇಶ, ಕೆ.ಜಿ.ವೀರೇಶ ಇದ್ದರು.

## ಮತದಾರರ ಪೂರ್ಣ ಮಾಹಿತಿ ಸಂಗ್ರಹಿಸಿ- ತಹಸೀಲ್ದಾರ ಸುರೇಶ ವರ್ಮಾ

ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ಅನರ್ಹ ಮತದಾರರನ್ನು ಪಟ್ಟಿಯಿಂದ ತೆಗೆಯಲು ಎಸ್‌ಐಆರ್ ಪ್ರಕ್ರಿಯೆಯನ್ನು ನಡೆಸಲಾಗುತ್ತಿದ್ದು, ದೋಷವಿಲ್ಲದ, ಪಾರದರ್ಶಕ ಮತದಾರರ ಪಟ್ಟಿಯನ್ನು ತಯಾರಿಸಲು ಬಿಎಲ್ ಮೇಲ್ವಿಚಾರಕರು, ಬಿಎಲ್‌ಓಗಳು, ಬಿಎಲ್‌ಎಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು. ಇದಕ್ಕೂ ಮೊದಲು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ ಸತ್ಯಂಪೇಟೆ ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಬಿಎಲ್‌ಓ ಮತ್ತು ಬಿಎಲ್‌ಎಗಳ ಕಾರ್ಯ ಮಹತ್ವದ್ದಾಗಿದ್ದು, ಪ್ರತಿ ಮನೆ ಮನೆಗೂ ತೆರಳಿ ಎಮೆರೇಷನ್ ಫಾರಂ ಅನ್ನು ಭರ್ತಿ ಮಾಡಿಕೊಳ್ಳಬೇಕು. ಇದರಲ್ಲಿ ಆಯಾ ವಲಯಗಳ ರಾಜಕೀಯ ಪ್ರತಿನಿಧಿಗಳ ಸಹಾಯವನ್ನೂ ತೆಗೆದುಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪಾಯುಕ್ತ ಕೃಷ್ಣಾ ಶಾವಂತಗೇರಾ, ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಸಿಡಿಪಿಓ ಮನ್ಸೂರ್, ಮಾಸ್ಟರ್ ಟ್ರೈನರ್ ಸದಾಶಿವಪ್ಪ ಸೇರಿದಂತೆ ಅನೇಕರಿದ್ದರು.

## ಪ್ರಧಾನಿ ನರೇಂದ್ರ ಮೋದಿ ಆಡಳಿತ ದಾಖಲೆ ಬಿಜೆಪಿ ಕಾರ್ಯಕರ್ತರಿಂದ ವಿಶೇಷ ಪೂಜೆ

ಪಕ್ಷದ ಮುಖಂಡರುಗಳು ಇದ್ದರು. ವಾರ್ಡ 17 ರಲ್ಲಿ ಮಹಾನಗರ ಪಾಲಿಕೆ ಮಾಜಿ ಸದಸ್ಯ ಇ.ಶಶಿರಾಜ ಇವರ ನೇತೃತ್ವದಲ್ಲಿ ಶ್ರೀರಾಘವೇಂದ್ರ ಸ್ವಾಮಿ ಮಠ, ಬೈಲು ಆಂಜಿನಯ್ಯ ದೇಔಸ್ತಾ, ಶಂಕರ ಮಠ, ವೈಕುಂಟ ವೀರಾಂಜನೇಯ ಸ್ವಾಮಿ ದೇವಸ್ಥಾಮ ನಗರೇಶ್ವರ ದೇವಸ್ಥಾನಗಳಲ್ಲಿ ವೀಶೇಷ ಪೂಜೆ ಸಲ್ಲಿಸಲಾಯಿತು.ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು. ಬಿಜೆಪಿ ಯುವ ಮೋರ್ಚಾದಿಂದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ 4399 ದಿನಗಳನ್ನು ಪೂರೈಸಿದ್ದರಿಂದ ನಗರದ ಉಸುಕಿನ ಆಂಜಿನೇಯ್ಯಸ್ವಾಮಿ ದೇವಸ್ಥಾನದಲ್ಲಲಿ ವಿಶೇಷ ಪೂಜೆ ನಡೆಸಲಾಯಿತು. ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ವಿನಾಯಕರಾವ್ ಮಾತನಾಡಿ ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿಯವರು ವಿಶ್ವ ಮೆಚ್ಚುವ ಕೆಲಸ ಮಾಡಿ ಸಮರ್ಥ ನಾಯಕತ್ವ ನೀಡಿದ್ದಾರೆ. ಅವರ ಆಡಳಿತ ಭವಿಷ್ಯದಲ್ಲಿ ವಿಶ್ವದಲ್ಲಿಯೇ ದೇಶ ಅಭಿವೃದ್ಧಿ ಪಥದಲ್ಲಿ ಮುನ್ನಡೆಯಲಿ ಎಂದು ಹಾರೈಸಿದರು. ಈ ಸಂದರ್ಬದಲ್ಲಿ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ರವಿಗೌಡ ಮೀರಾಪುರು, ಉಪಾಧ್ಯಕ್ಷ ಬಂಕ ರಾಕೇಶ, ಧನಂಜಯ ಗೌಡ, ಕಡಗೋಳ ರೋಹಿತ್, ವಿಜಯರಾಜ, ಸಂತೋಷ, ರಾಜು ಕೋಟರಿ, ವಿಶ್ವನಾಥ, ಮಹೇಶ, ಪ್ರಕಾಶ, ಮಹೇಶ, ಗಿರಿಜಾಪತಿ, ಸುರೇಶ ಸೇರಿ ಅನೇಕರಿದ್ದರು.

# ರೌಡಿಸಂ ಗೆ ಕಡಿವಾಣ ವಿಶೇಷ ರೌಡಿ ನಿಗ್ರಹ ಪಡೆ ರಚನೆ ತೇಜಸ್ವಿ ನಾಗಲಿಂಗಸ್ವಾಮಿ-ಸ್ವಾಗತ

■ ಕನ್ನಡ ಮಾತೃ ಭೂಮಿ ವಾರ್ತೆ

**ಮೈಸೂರ್,ಜೂ.10**-ನೂತನ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ರಾಜ್ಯದಲ್ಲಿ ನಡೆಯುತ್ತಿರುವ ರೌಡಿ ಚಟುವಟಿಕೆಗಳನ್ನು ಮಟ್ಟಹಾಕಲು ರೌಡಿ ನಿಗ್ರಹ ಪಡೆ ರಚನೆ ಮಾಡಿರುವುದನ್ನು ಕನ್ನಡ ಕ್ರಾಂತಿದಳ ರಾಜ್ಯಾಧ್ಯಕ್ಷ ತೇಜಸ್ವಿ ನಾಗಲಿಂಗಸ್ವಾಮಿ ಸ್ವಾಗತಿಸಿದ್ದಾರೆ.

ನಾನು ಕೂಡ ಅನೇಕ ವರ್ಷಗಳಿಂದ ರೌಡಿ ಚಟುವಟಿಕೆ ವಿರುದ್ಧ ಹೋರಾಟಗಳನ್ನು ನಡೆಸುತ್ತ ಬಂದಿದ್ದೇನೆ ಮತ್ತು ಅನೇಕ ಬಾರಿ ರಾಜ್ಯ ಸರ್ಕಾರಕ್ಕೆ ಮತ್ತು ಪೋಲಿಸ್ ಇಲಾಖೆಗೆ ರೌಡಿ ನಿಗ್ರಹ ಪಡೆ ಸ್ಥಾಪಿಸುವಂತೆ ಮನವಿ ಕೂಡಾ ಮಾಡಿದ್ದೆ ಈಗ ರೌಡಿ ನಿಗ್ರಹ ಪಡೆ ರಚನೆ ಆಗಿರುವುದು ಸಂತಸ ತಂದಿದೆ ಎಂದು ತೇಜಸ್ವಿ ನಾಗಲಿಂಗಸ್ವಾಮಿ ತಿಳಿಸಿದ್ದಾರೆ.

ಈ ರೌಡಿ ನಿಗ್ರಹ ಪಡೆ ರಚನೆ ಇಂದ ಜನ ಸಾಮಾನ್ಯರಿಗೆ ರೌಡಿ ಚಟುವಟಿಕೆ ಇದ್ದವರು ಬೆದರಿಕೆ ಹಾಕುವುದು ಮತ್ತು ಹಫ್ತಾ ವಸೂಲಿ ಮಾಡುವವರು ಮತ್ತು ಸಮಾಜದಲ್ಲಿ ಆತಂಕ ಉಂಟುಮಾಡುವವರ ಎದೆಯಲ್ಲಿ ನಡುಕ ಶುರುವಾಗುತ್ತದೆ



ಎಂದಿದ್ದಾರೆ.

ಒಟ್ಟಾರೆ ಸರ್ಕಾರದ ಈ ನಿರ್ಧಾರದಿಂದ ರೌಡಿ ಚಟುವಟಿಕೆ ಮಟ್ಟಹಾಕಲು ಅನುಕೂಲ ಮತ್ತು ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುತ್ತದೆ ಎಂದು ಕನ್ನಡ ಕ್ರಾಂತಿದಳ ರಾಜ್ಯಾಧ್ಯಕ್ಷ ತೇಜಸ್ವಿ ನಾಗಲಿಂಗಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಮತ್ತು ಈ ರೀತಿಯ ದಿಟ್ಟ ನಿರ್ಧಾರ ಕೈಗೊಂಡ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಅಭಿನಂದನೆಗಳೊಂದಿಗೆ ಧನ್ಯವಾದಗಳನ್ನು ಅರ್ಪಿಸಿದ್ದಾರೆ.



ಮಾಜಿ ಸಚಿವರಾದ ಎನ್.ಎಸ್ ಬೋಸರಾಜು ಸನ್ಮಾನ್ ಸಿರವಾರ.ಜೂ.10- ಕಾಂಗ್ರೆಸ್ ಸರ್ಕಾರದ ಮಾಜಿ ಸಚಿವರಾದ ಎನ್ ಎಸ್ ಬೋಸರಾಜ ಅವರ ಹುಟ್ಟುಹಬ್ಬದ ಅಂಗವಾಗಿ ಶಾಲು ಮತ್ತು ಹೂವಿನ ಹಾರ ಹಾಕಿ ಸಿಹಿ ತಿನ್ನಿಸುವ ಮೂಲಕ ಪಟ್ಟಣ ಪಂಚಾಯತ ಅದ್ಯಕ್ಷರಾದ ಹಾಜಿ ಚೌದ್ರಿ, ಸದಸ್ಯರಾದ ಹಸೆನ್‌ಅಲಿ ಸಾಬ, ಸೂರಿ ದುರಗಣ್ಣ ನಾಯಕ, ಮೌಲಸಾಬ ವರ್ಚಸ್, ಎಚ್ ಮಾರ್ಕಪ್ಪ ರಂಗನಾಥ ಶುಭಕೋರಿದರು.

# ಪ್ರಧಾನಿ ನರೇಂದ್ರ ಮೋದಿ ಅವರ 12 ವರ್ಷಗಳ ಸುದೀರ್ಘ ಸೇವೆ ಸಿರವಾರದಲ್ಲಿ ವಿಶೇಷ ಪೂಜೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಸಿರವಾರ, ಜೂ.10**-ಭಾರತದ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಪ್ರಧಾನಿಯಾಗಿ ಜೂನ್ 10, 2026ಕ್ಕೆ 12 ವರ್ಷಗಳನ್ನು ಪೂರೈಸಿದ್ದಾರೆ. ಈ ಮೂಲಕ ಅತ್ಯಂತ ಸುದೀರ್ಘ ಅವಧಿಗೆ ಸತತವಾಗಿ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಿ ಎಂಬ ವಿಶಿಷ್ಟ ಗೌರವಕ್ಕೆ ಅವರು ಪಾತ್ರರಾಗಿದ್ದಾರೆ.

ಜವಾಹರಲಾಲ್ ನೆಹರು ಅವರ 4,398 ದಿನಗಳ ದಾಖಲೆಯನ್ನು ಸರಿಗಟ್ಟಿರುವ ಹಿನ್ನೆಲೆಯಲ್ಲಿ, ಸಿರವಾರ ಪಟ್ಟಣದ ವಾರ್ಡ್ ನಂ. 2ರಲ್ಲಿರುವ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಮೋದಿ ಅವರ ಆರೋಗ್ಯ, ಆಯುರಾರೋಗ್ಯ ವೃದ್ಧಿ ಹಾಗೂ ದೇಶದ ಸುಭಿಕ್ಷ ಆಡಳಿತಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಿರವಾರ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ನಾಯಕ ಸಿಕಂಟಿ, ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತದಲ್ಲಿ ಭಾರತವು ಜಗತ್ತಿನ ಶಕ್ತಿಶಾಲಿ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ. ಆಧುನಿಕ ತಂತ್ರಜ್ಞಾನದ ಅಳವಡಿಕೆ ಮತ್ತು ದೂರದೃಷ್ಟಿಯ ನಾಯಕತ್ವದಿಂದಾಗಿ ಭಾರತವು ಸುಭದ್ರ ರಾಷ್ಟ್ರವಾಗಿ ನಿರ್ಮಾಣವಾಗುತ್ತಿದೆ. ಶತ್ರು ರಾಷ್ಟ್ರಗಳೂ ಕೂಡ ಭಾರತದತ್ತ ನೋಡುವಂತೆ ಚಾಣಕ್ಯತನದಿಂದ ದೇಶವನ್ನು ಮುನ್ನಡೆಸುತ್ತಿರುವ ಮೋದಿ ಅವರ ನಾಯಕತ್ವ ಶ್ಲಾಘನೀಯ, ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಅಯ್ಯಪ್ಪ ಪೂಜಾರಿ, ಹನುಮಂತ್ರಾಯ ನಾಯಕ, ರಾಜು ಮೇದಾರ್, ಸುರೇಶ್ ಕಪ್ಪಲ್, ವಿಶ್ವ ಸಿಕಂಟಿ, ಶರಣು ದಾಸ್ರ, ರವಿ ಬಡಿಗೇರ, ಕೃಷ್ಣ, ಉದಯ್ ಕಪಲ್, ಶ್ರೀನಿವಾಸ ಕಪಲ್, ವಿನೋದ್, ಗಣೇಶ ದಾಸರ್ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಭಾಗವಹಿಸಿದ್ದರು.

# ಹಟ್ಟಿ ಪಟ್ಟಣದಲ್ಲಿ ಮೊಹರಂ ಪ್ರಯುಕ್ತ, ಬೀದಿದೀಪ, ಸಿಸಿ ಕ್ಯಾಮರಾ ಅಳವಡಿಕೆಗೆ ಡಿವೈಎಫ್‌ಐ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ

**ಹಟ್ಟಿ ಚಿನ್ನದ ಗಣಿ,ಜೂ.10**-ಇದೇ ತಿಂಗಳ 26 ರಂದು ದೇಶಾದ್ಯಂತ ಮೊಹರಂ ಹಬ್ಬ ಆಚರಿಸುತ್ತಿರದ ಹಿನ್ನೆಲೆ ಹಟ್ಟಿ ಪಟ್ಟಣದ ಜಾಮಿಯಾ ಮಸೀದಿ ರಸ್ತೆಯಿಂದ ಹನುಮಂತ ಗುಡಿಯವರೆಗೆ ಬೀದಿ ದೀಪಗಳನ್ನು ಅಳವಡಿಸುವುದರ ಜೊತೆಗೆ ಸಿಸಿ ಕ್ಯಾಮರಾಗಳನ್ನು ಸ್ಥಾಪಿಸಬೇಕು ಎಂದು ಡಿವೈಎಫ್‌ಐ(ಈಗ್ಗಲೂಐ) ಸಂಘಟನೆ ಆಗ್ರಹಿಸಿದರು.

ಮೊಹರಂ ಹಬ್ಬದ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಸಂಚರಿಸುವ ಹಿನ್ನೆಲೆಯಲ್ಲಿ ರಸ್ತೆಗಳಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆ ಹಾಗೂ ನಿಗಾವ್ಯವಸ್ಥೆ ಕಲ್ಪಿಸುವುದು ಅಗತ್ಯವಾಗಿದೆ ಎಂದು ಹಟ್ಟಿ ಪಟ್ಟಣದ ಮುಖ್ಯಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಯಾವುದೇ ಅಹಿತಕರ ಘಟನೆಗಳು ಅಥವಾ



ಕೋಮು ಸೌಹಾರ್ದಕ್ಕೆ ಧಕ್ಕೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪ್ರಮುಖ ರಸ್ತೆಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಬೇಕು ಹಾಗೂ ರಸ್ತೆಗಳಲ್ಲಿ ಇರುವ ತೆಗ್ಗು-ಬಗ್ಗುಗಳನ್ನು ಸರಿಪಡಿಸಿ ಅಗತ್ಯ ದುರಸ್ತಿ ಕಾಮಗಾರಿ ಕೈಗೊಳ್ಳುವಂತೆ ತಿಳಿಸಿದರು.

ಹಬ್ಬವನ್ನು ಶಾಂತಿಯುತ ಹಾಗೂ ಸುವ್ಯವಸ್ಥಿತವಾಗಿ ಆಚರಿಸಲು ಸ್ಥಳೀಯ ಆಡಳಿತ ಮತ್ತು ಸಂಬಂಧಿತ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಡಿವೈಎಫ್‌ಐ ಸಂಘಟನೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಡಿವೈಎಫ್‌ಐ ತಾಲೂಕ ಮುಖಂಡರು ಪಿಯಾಜ್ ಬಂಡಿ, ಚೆನ್ನಬಸವ,ಇಬ್ರಾನ್, ರಿಯಾಜ್ ಖುರೇಶಿ, ಕಟ್ಟಡ ಕಾರ್ಮಿಕರ ತಾಲೂಕ ಅಧ್ಯಕ್ಷರು ನಿಂಗಪ್ಪ ಎಂ.ಕಾರ್ಯದರ್ಶಿ ಹಾಜಿಬಾಬು ಕಟ್ಟೀಮನಿ, ಮಹಾಂತೇಶ ಇನ್ನಿತರರು ಸೇರಿಕೊಂಡ ಮನವಿ ಪತ್ರ ಸಲ್ಲಿಸಿ ಈ ಎಲ್ಲಾ ಬೇಡಿಕೆಗಳನ್ನು ಹಿಡೇರಿಸದೆ ಇದ್ದಲ್ಲಿ ತಮ್ಮ ಪಟ್ಟಣ ಪಂಚಾಯಿತಿ ಮುಂದೆ ಧರಣೆ ಮಾಡಲಾಗುತ್ತದೆ.ಎಂದು ಆಗ್ರಹಿಸಿದರು.

### ಕಸ ಸಂಸ್ಕರಣೆ ಹೆಸರಲ್ಲಿ ₹39 ಸಾವಿರ ಕೋಟಿ ಹಗರಣ ಆರೋಪ

# ರಾಜ್ಯಪಾಲರು, ಲೋಕಾಯುಕ್ತಕ್ಕೆ ಬಿಜೆಪಿ ದೂರು

**ಬೆಂಗಳೂರು,ಜೂ.10**-ಜಿಬಿಎ ವ್ಯಾಪ್ತಿಯ ಏಕೀಕೃತ ಘನತಾಜ್ಯ ನಿರ್ವಹಣೆ ಹಾಗೂ ಸಂಸ್ಕರಣೆಗಾಗಿ ಕಪ್ಪು ಪಟ್ಟಿಗೆ ಸೇರಿರುವ ಕಂಪೆನಿಯೊಂದಕ್ಕೆ ಕಾನೂನುಬಾಹಿರವಾಗಿ ಟೆಂಡರ್ ನೀಡುವ ಮೂಲಕ ರಾಜ್ಯ ಸರ್ಕಾರ ಸಾರ್ವಜನಿಕರಿಗೆ ಸೇರಿದ ಕೋಟ್ಯಂತರ ರೂಪಾಯಿ ಪೋಲು ಮಾಡಲು ಮುಂದಾಗಿದೆ ಎಂದು ಆರೋಪಿಸಿ ಬಿಜೆಪಿಯು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹಾಗೂ ಲೋಕಾಯುಕ್ತಕ್ಕೆ ದೂರು ನೀಡಿದೆ.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಅಧಿಕಾರಕ್ಕೆ ಇಳಿಯುವ ಕೆಲವೇ ದಿನಗಳಲ್ಲಿ ಸಚಿವ ಸಂಪುಟ ಸಭೆಯಲ್ಲಿ ಬೃಹತ್ ಮೊತ್ತದ ಟೆಂಡರ್ಗೆ ಅನುಮೋದನೆ ನೀಡಲಾಗಿದೆ. 30 ವರ್ಷಗಳ ಕಾಲ ಗುತ್ತಿಗೆ ನೀಡಲಾಗಿದ್ದು, ಇದರ ಮೊತ್ತ 39 ಸಾವಿರ ಕೋಟಿ ರೂ.ಗಳಾಗಿದೆ. ಇದರಲ್ಲಿ 10 ಸಾವಿರ ಕೋಟಿ ರೂ.ಗಳನ್ನು ಕಾಂಗ್ರೆಸ್ ನಾಯಕರು ಕಿಕ್ ಬ್ಯಾಕ್ ಪಡೆದಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದ್ದು, ಸಮಗ್ರ ತನಿಖೆ ನಡೆಸುವಂತೆ ಮನವಿ ಮಾಡಿದ್ದಾರೆ.

ಹಗರಣ ಕುರಿತು ಮಾತನಾಡಿದ ಅಶೋಕ್, ಪ್ರತಿದಿನ ನಗರದಲ್ಲಿ ಸುಮಾರು 6 ಸಾವಿರ ಟನ್ ತ್ಯಾಜ್ಯ ಉತ್ಪಾದನೆಯಾಗುತ್ತಿದೆ. ಘನತ್ಯಾಜ್ಯ ವಿಲೇವಾರಿ ಹಾಗೂ ಸಂಸ್ಕರಣೆಗಾಗಿ ಹೊಸ ಪ್ರಸ್ತಾವನೆಗೆ

ಸಚಿವ ಸಂಪುಟ ಅನುಮೋದನೆ ನೀಡಿದೆ. ಕಸ ಸಂಸ್ಕರಣೆ ಹಾಗೂ ವಿಲೇವಾರಿಗಾಗಿ ಪ್ರತಿ ಟನ್‌ಗೆ ಪ್ರಸ್ತುತ ದರ 260 ದರವಿದೆ. ಹೊಸ ಪ್ರಸ್ತಾವನೆಯಲ್ಲಿ 2,400 ರೂಪಾಯಿ ವಿಧಿಸುವ ಮೂಲಕ 9 ಪಟ್ಟು ದರ ಹೆಚ್ಚಿಸಲಾಗಿದೆ. ಇದರಂತೆ 30 ವರ್ಷಕ್ಕೆ 39,437 ಕೋಟಿ ರೂ. ಮೊತ್ತ



ಶುಲ್ಕ ರೂಪದಲ್ಲಿ ಟೆಂಡರ್ ಪಡೆದ ಕಂಪೆನಿಗೆ ಪಾವತಿಬೇಕಾಗುತ್ತದೆ. ಈಗಿನ ಮೊತ್ತಕ್ಕಿಂತ 33,320 ಕೋಟಿ ರೂ. ಹೆಚ್ಚಾಗಲಿದೆ. ಸಾವಿರಾರು ಕೋಟಿ ಸಾರ್ವಜನಿಕ ತೆರಿಗೆ ಹಣವನ್ನ ಶುಲ್ಕ ನೆಪದಲ್ಲಿ ಪಾವತಿಸಿ ಖಾಸಗಿ ಕಂಪೆನಿಗೆ ಅನುಕೂಲ ಮಾಡಿ ಕೊಡಲು ಹೊರಟಿದೆ. ಅಲ್ಲದೆ, ಸುಮಾರು 10 ಸಾವಿರ ಕೋಟಿ ಕಿಕ್ ಬ್ಯಾಕ್ ಪಡೆಯಲಾಗಿದೆ. ಈ ಹಣದಲ್ಲಿ ಹಿಂದಿನ ಹಾಗೂ ಈಗಿನ ಸಿಎಂ ಸೇರಿದಂತೆ ಎಲ್ಲರ ಪಾಲಿದೆ ಎಂದು ಆರೋಪಿಸಿದ್ದಾರೆ.

ಟೆಂಡರ್‌ನಲ್ಲಿ ಗೋಲ್‌ಮಾಲ್: ಸಮಗ್ರ ಘನತಾಜ್ಯ ನಿರ್ವಹಣೆಗಾಗಿ ಬೆಂಗಳೂರು ದಕ್ಷಿಣ ಹಾಗೂ ಉತ್ತರ ಎಂಬಂತೆ ಎರಡು ಪ್ಯಾಕೇಜ್ ಮಾಡಿ, ಎರಡು ಬಾರಿ ಟೆಂಡರ್ ಕರೆದರೂ ಯಾವ ಕಂಪೆನಿಗಳು ಆಸಕ್ತಿ ತೋರಿರಲಿಲ್ಲ. ಮೂರನೇ ಬಾರಿ ಟೆಂಡರ್ ಆಹ್ವಾನ ಕುರಿಂತೆ ಪತ್ರಿಕಾ ಪ್ರಕಟಣೆ ಹೊರಡಿಸದೆ ರಾಮ್ಕಿ ಕಂಪೆನಿಗೆ ಕಾನೂನುಬಾಹಿರವಾಗಿ ಟೆಂಡರ್ ನೀಡಲಾಗಿದೆ. ಪ್ರತಿ ವರ್ಷ ಶೇ.5ರಷ್ಟು ಹೆಚ್ಚುವರಿ ಶುಲ್ಕ ಪಾವತಿಗೆ ಅವಕಾಶ ಕಲ್ಪಿಸಿದೆ. ಇದು ಗುತ್ತಿಗೆಯ 30 ವರ್ಷಕ್ಕೆ ಹೋಲಿಸಿದಾಗ ಶೇ.430ರಷ್ಟು ಶುಲ್ಕ ಹೆಚ್ಚಳವಾಗಲಿದೆ. ಟೆಂಡರ್ ಜಾರಿಯಾದರೆ ಬೆಂಗಳೂರಿಗೆ ದೊಡ್ಡ ಆರ್ಥಿಕ ಸಂಕಷ್ಟವಾಗಲಿದೆ. ಹೀಗಾಗಿ ಟೆಂಡರ್ ರದ್ದುಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಬೃಹತ್ ಮೊತ್ತದ ಟೆಂಡರ್ಗೆ ಅನುಮೋದನೆ ಮೂಲಕ ರಾಜ್ಯ ಹಾಗೂ ಕೇಂದ್ರ, ನಾಯಕರಿಗೆ ದುಡ್ಡು ಹೋಗಿದೆ. ಹಳೇ ಸಿಎಂ, ಹೊಸ ಸಿಎಂಗೂ ದುಡ್ಡು ಹೋಗಿದೆ.

ಇವರ ಸರ್ಕಾರ ಇರುವುದೇ ಒಂದು ವರ್ಷ 11 ತಿಂಗಳು. ಆದರೆ 30 ವರ್ಷಕ್ಕೆ ಟೆಂಡರ್ ಹೇಗೆ ಕರೆಯುತ್ತಾರೆ. ಕಿಕ್ ಬ್ಯಾಕ್ ಸಿಗದೆ ಟೆಂಡರ್ ಕೊಡುತ್ತಾರೆಯೇ ಎಂದು ಆರ್.ಅಶೋಕ್ ಪ್ರಶ್ನಿಸಿದ್ದಾರೆ.

ಟೆಂಡರ್ ಕುರಿತಂತೆ ಹಣಕಾಸು ಇಲಾಖೆ ಆತಂಕ ವ್ಯಕ್ತಪಡಿಸಿದ್ದು, ದುಬಾರಿ ಮೊತ್ತದ ಟೆಂಡರ್ ಅಪಾಯಕಾರಿ ಎಂದು ಎಚ್ಚರಿಕೆ ನೀಡಿದೆ. ಮುಂದೆ ದೊಡ್ಡಮಟ್ಟದ ತೊಂದರೆ ಆಗುತ್ತೆ ಎಂದು ಇಲಾಖೆ ಆತಂಕ ವ್ಯಕ್ತಪಡಿಸಿದೆ ಎಂದು ಆಶೋಕ್ ತಿಳಿಸಿದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L